ಸಂಪುಟ : 9 ಸಂಚಿಕೆ 104 ಪುಟ : 4 ಬೆಲೆ: 3.00 ರವಿವಾರ ಮೇ 26 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 104 Pages : 4 Price : 3.00 Sunday May 26 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮರಾಠಾ ವಿದ್ಯಾ ವರ್ಧಕ ಸಂಘದ ವತಿಯಿಂದ ಜೂನ್ 16ರ ಬೆಳಿಗ್ಗೆ 11 ಗಂಟೆಗೆ ಸಮಾಜದ ಹಾಲ್‌ನಲ್ಲಿ ಮರಾಠಾ ಸಮಾಜದ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆ–2024ರಲ್ಲಿ ಹೆಚ್ಚು ಅಂಕ ಪಡೆದು ತೇರ್ಗಡೆಯಾದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

5ನೇ ತರಗತಿಯಿಂದ 10ನೇ ತರಗತಿಯಲ್ಲಿ ವ್ಯಾಸಾಂಗ ಮಾಡುವ ವಿದ್ಯಾರ್ಥಿಗಳಿಗೆ ನೋಟಬುಕ್ ವಿತರಣೆ ಮಾಡಲಾಗುವುದು. ಸಮಾಜದ ವಿದ್ಯಾರ್ಥಿಗಳು ತಮ್ಮ ಮಾರ್ಕ್ಸ್ ಕಾರ್ಡ್ ಮತ್ತು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಅರ್ಜಿಯನ್ನು ಸಮಾಜದ ಕಾರ್ಯಾಲಯದಲ್ಲಿ ಸಂಜೆ 4ರಿಂದ 6 ಗಂಟೆಯವರೆಗೆ ಖುದ್ದಾಗಿ ಸಲ್ಲಿಸಬೇಕು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಕೊಡುವ ಕೊನೆಯ ದಿನ ಜೂನ್ 8 ಆಗಿರುತ್ತದೆ ಎಂದು ಸಂಘದ ಅಧ್ಯಕ್ಷ ವಿನಿತಕುಮಾರ ವ್ಹಿ.ಜಗತಾಪ, ಗೌರವ ಕಾರ್ಯದರ್ಶಿ ಶಿವಾಜಿ ವಾಯ್.ಗ್ವಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನ್ನಪೂರ್ಣ ತಾಯಿಯವರಿಗೆ ನುಡಿನಮನ

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮೇ 26ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1595ನೇ ಶರಣ ಸಂಗಮದಲ್ಲಿ ಪೂಜ್ಯ ಲಿಂ. ಡಾ. ಅಕ್ಕ ಅನ್ನಪೂರ್ಣ ತಾಯಿ ಇವರಿಗೆ ನುಡಿನಮನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ಎಸ್.ಎ. ಮುಗದ ನುಡಿನಮನ ಸಲ್ಲಿಸುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಕೊಣ್ಣೂರ ರೈತ ಸಂಪರ್ಕ ಕೇಂದ್ರ ದಾಸ್ತಾನು ವಿವರ

■ವಿಜಯಸಾಕ್ಷಿ ಸುದ್ದಿ, ನರಗುಂದ

ವಾರದಿಂದ ಮುಂಗಾರು ಪ್ರವೇಶವಾಗಿದ್ದು, ವಾಡಿಕೆಯಂತೆ ಹೆಸರು ಬೀಜ ಬಿತ್ತನೆ ಹೆಚ್ಚಿನ ಪ್ರಮಾಣದಲ್ಲಿ ಆಗುವ ನಿರೀಕ್ಷೆಯಿದೆ. ತಾಲೂಕಿನ ಕೊಣ್ಣೂರ ಹೋಬಳಿ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರದಲ್ಲಿ ಸಮರ್ಪಕವಾಗಿ ರೈತರಿಗೆ ಬೀಜ ಒದಗಿಸಲು ಸೂಕ್ತ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ಎಎಚ್‌ಓ ನವೀನ ಪಾಟೀಲ ತಿಳಿಸಿದ್ದಾರೆ.

ಈಗಾಗಲೇ 25 ಕ್ವಿಂಟಲ್ ಹೆಸರು ಬೀಜವನ್ನು ಕೆಎಸ್‌ಎಸ್‌ಸಿ ಗದಗ ಶಾಖೆಯಿಂದ ಶೇಖರಿಸಿದ್ದು, ಇನ್ನು 75 ಕ್ವಿಂಟಲ್ ಬೀಜ ಮೇ 27ರಂದು ಲಭ್ಯವಾಗಲಿದೆ. ಕಳೆದ ವರ್ಷ ಮಳೆಯ ಅಭಾವದಿಂದ 40 ಕ್ವಿಂಟಲ್ ಹೆಸರು ಬೀಜ ಮಾತ್ರ ಬಿತ್ತನೆಯಾಗಿತ್ತು. ಈ ಬಾರಿ 70–80 ಕ್ವಿಂಟಲ್ ಬಿತ್ತನೆಯಾಗುವ ನಿರೀಕ್ಷೆಯಿದೆ. ಕಳೆದ ವರ್ಷ ಪ್ರತಿ 5 ಕೆಜಿ ಹೆಸರು ಬೀಜ 435 ರೂ ದರ ನಿಗದಿಯಾಗಿತ್ತು. ಈ ಬಾರಿ ಬೀಜ ಸಂರಕ್ಷಣೆಯಲ್ಲಿ ಕೊರತೆಯಾಗಿದ್ದರಿಂದ ಪ್ರತಿ 5 ಕೆಜಿ ಬೀಜದ ದರವನ್ನು 805 ರೂ ನಿಗದಿ ಮಾಡಲಾಗಿದೆ. ಮೇ 27ರಿಂದ ಬೀಜ ವಿತರಣೆ ಪ್ರಾರಂಭಿಸಲಾಗುತ್ತಿದ್ದು, ರೈತರು ಆಧಾರ್ ಕಾರ್ಡ್ ಝುರಾಕ್ಸ ಪ್ರತಿಯೊಂದಿಗೆ ನಿಗದಿತ ಹಣ ಪಾವತಿಸಿ ಬೀಜಗಳನ್ನು ಪಡೆಯಬಹುದು ಎಂದು ಅವರು ತಿಳಿಸಿದ್ದಾರೆ.

### ಬತ್ತಿದ ವಿಕ್ಟೋರಿಯಾ ರಾಣಿ ಕೆರೆಯ ಫಲವತ್ತಾದ ಮಣ್ಣು ಇಟ್ಟಿಗೆ ಭಟ್ಟಿಗಳ ಪಾಲು । ಕಡಿವಾಣ ಹಾಕಲು ಒತ್ತಾಯ

# ಕೆರೆಯ ಮಣ್ಣನ್ನೂ ನುಂಗುವ ಬಕಾಸುರರು!

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯಾದ್ಯಂತ ಭೀಕರ ಬರಗಾಲ ತಾಂಡವವಾಡುತ್ತಿದೆ. ಎಲ್ಲೆಲ್ಲೂ ನೀರಿಗಾಗಿ ಹಾಹಾಕಾರ ಮುಗಿಲುಮುಟ್ಟಿದೆ. ಒಂದೆಡೆ ಹಳ್ಳ–ಕೊಳ್ಳಗಳು, ನದಿ–ಸರೋವರಗಳೆಲ್ಲ ಸಂಪೂರ್ಣ ಬತ್ತಿಹೋಗಿ ಬಿರುಕುಬಿಟ್ಟು, ನೋಡಿದವರನ್ನು ಅಣುಕಿಸುತ್ತಿದ್ದರೆ, ಇನ್ನೊಂದೆಡೆ ಸಾರ್ವಜನಿಕರು ನೀರಿನ ಅಭಾವದಿಂದ ಕಂಗೆಟ್ಟು ಹೋಗಿದ್ದಾರೆ. ಎಲ್ಲೆಲ್ಲೂ ನೀರಿಗಾಗಿ ಹಾಹಾಕಾರವೆದ್ದಿದೆ. ಆದರೆ, ಸದಾ ದುಡ್ಡಿನ ಬೆನ್ನತ್ತಿರುವ ನುಂಗಣ್ಣಗಳಿಗೆ ಮಾತ್ರ ಇದ್ಯಾವುದರ ಪರಿವೆಯಿಲ್ಲ. ಅವರದ್ದೇನಿದ್ದರೂ, ಯಾವ ವಿಧದಲ್ಲಿ, ಯಾವ ಮೂಲದಿಂದ ಒಂದಿಷ್ಟು ಹಣ ಬಾಚಿಕೊಳ್ಳಬೇಕು ಎಂಬುದಷ್ಟೇ ಗುರಿ.



ಭೀಕರ ಬರಕ್ಕೆ ಕೆರೆಗಳೆಲ್ಲ ಬತ್ತಿಹೋಗಿದ್ದರೆ, ಮಣ್ಣು ಮಾಫಿಯಾದ ಕರುಣಾಹೀನರು ಅದನ್ನೇ ಬಂಡವಾಳವಾಗಿಸಿಕೊಂಡಿದ್ದಾರೆ. ಕೆರೆಯಲ್ಲಿ ಸಂಗ್ರಹವಾಗಿರುವ ಮಣ್ಣು ಯಾವ ಅಡ್ಡಿಯೂ ಇಲ್ಲದೆ ಲೂಟಿಯಾಗುತ್ತಿದೆ. ಜೆಸಿಬಿಗಳ ಮೂಲಕ ರಾಜಾರೋಷವಾಗಿ ಕೆರೆಯನ್ನು ಬಗೆದು, ಟಿಪ್ಪರ್, ಟ್ರ್ಯಾಕ್ಟರ್‌ಗಳ ಮೂಲಕ ಇಟ್ಟಿಗೆ ಭಟ್ಟಿಗಳಿಗೆ ಸಾಗಿಸಲಾಗುತ್ತಿದೆ. ಈ ಪ್ರಮಾಣದಲ್ಲಿ ಕಾನೂನುಬಾಹಿರವಾಗಿ ಮಣ್ಣು ಲೂಟಿಯಾಗುತ್ತಿದ್ದರೂ ಅಧಿಕಾರಿಗಳು ಮಾತ್ರ ಮೌನಕ್ಕೆ ಶರಣಾಗಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಡಂಬಳ ಗ್ರಾಮ ವ್ಯಾಪ್ತಿಯ ಐತಿಹಾಸಿಕ ವಿಕ್ಟೋರಿಯಾ ರಾಣಿ ಕೆರೆ ಅಂದಾಜು 530 ಎಕರೆ ವಿಸ್ತೀರ್ಣವನ್ನು ಹೊಂದಿದೆ. ಡಂಬಳ, ಮೇವುಂಡಿ ಸೇರಿದಂತೆ 300ಕ್ಕೂ ಹೆಚ್ಚು ಹೆಕ್ಟೇರ್ ಪ್ರದೇಶಕ್ಕೆ ಇದೇ ಕೆರೆ ನೀರಾವರಿಯ ಮೂಲವಾಗಿದೆ. ಆದರೆ, ಈ ಬಾರಿಯ ಭೀಕರ ಬರಗಾಲದಿಂದ ಕೆರೆ ಸಂಪೂರ್ಣ ಬತ್ತಿಹೋಗಿದೆ. ಕೆರೆಯ ಮಣ್ಣು ಈಗ ಲೂಟಿಕೋರರ ಪಾಲಾಗುತ್ತಿದೆ. ಡಂಬಳ ಭಾಗದಲ್ಲಿ ಹತ್ತಾರು ಇಟ್ಟಿಗೆ ಭಟ್ಟಿಗಳಿವೆ. ಇದೇ ಫಲವತ್ತಾದ ಮಣ್ಣು ಇಟ್ಟಿಗೆ ಭಟ್ಟಿಗಳಿಗೆ ಮೂಲ ವಸ್ತು. ಹಾಡಹಗಲೇ ಕೆರೆಯ ಅಂಗಳದಲ್ಲಿ ಜೆಸಿಬಿ ಮೂಲಕ ಮಣ್ಣು ಬಗೆದು, ಟಿಪ್ಪರ್ ಹಾಗೂ ಟ್ರ್ಯಾಕ್ಟರ್ ಮೂಲಕ ಇಟ್ಟಿಗೆ ಭಟ್ಟಿಗಳಿಗೆ ಸಾಗಿಸಲಾಗುತ್ತಿದೆ.

ಕೆರೆ ಖಾಲಿಯಾಗಿದ್ದು, ಹೂಳು ತೆಗೆಯುವುದು ಸ್ಥಳೀಯ ಗ್ರಾಮ ಪಂಚಾಯಿತಿ ಹಾಗೂ ಜಿಲ್ಲಾಡಳಿತದ ಕೆಲಸ. ಇದೇ ಮಣ್ಣನ್ನು ರೈತರು ತಮ್ಮ ಜಮೀನುಗಳಿಗೆ ಸಾಗಿಸಿದ್ದರೆ ಒಪ್ಪಬಹುದಾಗಿತ್ತು. ಆದರೆ, ವಾಣಿಜ್ಯ ಉದ್ದೇಶ ಹೊಂದಿದ ಇಟ್ಟಿಗೆ ಭಟ್ಟಿಗಳ ಪಾಲಾಗುತ್ತಿದ್ದು, ಇದಕ್ಕೆ ಸ್ಥಳೀಯ ಅಧಿಕಾರಿಗಳ ಸಹಕಾರವೂ ಇದೆ ಎನ್ನುವ ಆರೋಪಗಳೂ ಕೇಳಿಬರುತ್ತಿವೆ. ಕೂಡಲೇ ಮಣ್ಣು ಲೂಟಿಗೆ ಕಡಿವಾಣ ಹಾಕಬೇಕು ಎಂದು ಗ್ರಾಮಸ್ಥರು ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

ವಿಕ್ಟೋರಿಯಾ ರಾಣಿ ಕೆರೆಯ ಕೋಟ್ಯಾಂತರ ರೂಪಾಯಿ ಬೆಲೆಬಾಳುವ ಮಣ್ಣು ಯಾವುದೇ ಶುಲ್ಕವಿಲ್ಲದೆ ಉಚಿತವಾಗಿ ಇಟ್ಟಿಗೆ ಭಟ್ಟಿಗಳ ಪಾಲಾಗುತ್ತಿದೆ. ಇದರಿಂದ ಸರ್ಕಾರಕ್ಕೂ ಯಾವುದೇ ಆದಾಯವಿಲ್ಲ. ಆದರೆ, ಇಟ್ಟಿಗೆ ಭಟ್ಟಿಗಳ ಮಾಲೀಕರು ಮಾತ್ರ ತಮ್ಮ ಹಣದ ಚೀಲ ತುಂಬಿಕೊಳ್ಳುತ್ತಿದ್ದಾರೆ. ಸ್ಥಳೀಯ ಅಧಿಕಾರಿಗಳು ಇಟ್ಟಿಗೆ ಭಟ್ಟಿಗಳ ಮಾಲೀಕರ ಜೊತೆಗೆ ಶಾಮೀಲಾಗಿ ಮಣ್ಣು ಲೂಟಿ ಮಾಡುತ್ತಿದ್ದಾರೆ ಎನ್ನುವ ಆರೋಪದ ಮಾತುಗಳು ಕೇಳಿಬರುತ್ತಿವೆ. ಇನ್ನಾದರೂ ಜಿಲ್ಲಾಡಳಿತ ಹಾಗೂ ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು ಎಚ್ಚೆತ್ತು, ಅಕ್ರಮ ಮಣ್ಣು ಸಾಗಾಣಿಕೆಗೆ ಕಡಿವಾಣ ಹಾಕಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.



### ಕೆ.ಎಸ್.ಆರ್.ಟಿ.ಸಿ ಡ್ರೈವರ್‌ಗೆ ವಿಮಾ ಕಂಪನಿಯಿಂದ ವಿಮೆ ಹಣ ಕೊಡಲು ನಿರಾಕರಣೆ

# ಗ್ರಾಹಕನಿಗೆ ನ್ಯಾಯ ದೊರಕಿಸಿಕೊಟ್ಟ ಆಯೋಗ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೆಎಸ್‌ಆರ್‌ಟಿಸಿ ಚಾಲಕ, ಧಾರವಾಡ ನಿವಾಸಿ ಮಂಜುನಾಥ ಮಡಿವಾಳ ಎಂಬುವವರು ತಮ್ಮ ಕಾರ್‌ನಲ್ಲಿ ಪ್ರಯಾಣಿಸುವಾಗ ಜೋಯಿಡಾ ತಾಲೂಕಿನ ಅನ್‌ಮೋದ ಆರ್.ಟಿ.ಓ. ಚೆಕ್–ಪೋಸ್ಟ್ ಹತ್ತಿರ ಅಪಘಾತಕ್ಕೀಡಾಗಿ ಕಾರಿಗೆ ಜಖಂ ಆಗಿತ್ತು. ಈ ಬಗ್ಗೆ ರಾಮನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆ ವಾಹನವನ್ನು ಧಾರವಾಡದ ಮೈಸೂರ ಗ್ಯಾರೇಜ್‌ಗೆ ರಿಪೇರಿಗಾಗಿ ಬಿಟ್ಟಿದ್ದರು. ನಂತರ ಅದರ ರಿಪೇರಿಯ ಖರ್ಚಿನ ಎಲ್ಲ ದಾಖಲೆಗಳನ್ನು ಎದುರುದಾರ ಎಚ್‌ಡಿಎಫ್‌ಸಿ ವಿಮಾ ಕಂಪನಿಗೆ ನೀಡಿ ವಿಮಾ ಹಣ ಕೊಡುವಂತೆ ಕೇಳಿದ್ದರು. ಆದರೆ ವಿಮಾ ಕಂಪನಿಯವರು ದೂರುದಾರರ ವಿಮಾ ಕ್ಲೇಮನ್ನು ಕೊಟ್ಟಿರಲಿಲ್ಲ. ಅಂತಹ ವಿಮಾ ಕಂಪನಿಯವರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನತೆ ಆಗುತ್ತದೆ ಎಂದು ಆ ಬಗ್ಗೆ ವಿಮಾ ಕಂಪನಿಯವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರರು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.




ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ, ಸದಸ್ಯರಾದ ವಿಶಾಲಾಕ್ಷಿ ಬೋಳಶೆಟ್ಟಿ ಮತ್ತು ಪ್ರಭು ಹಿರೇಮಠ, ದೂರುದಾರರು ರೂ.9,079/– ಪ್ರೀಮಿಯಮ್ ಹಣ ಕಟ್ಟಿ ಎದುರುದಾರ ವಿಮಾ ಕಂಪನಿಯಿಂದ ಪಾಲಿಸಿ ಪಡೆದಿದ್ದಾರೆ. ವಾಹನ ಅಪಘಾತ ದಿನದಂದು ಆ ಪಾಲಿಸಿ ಚಾಲ್ತಿಯಿರುತ್ತದೆ. ಅಪಘಾತದಂತಹ ಸಂದರ್ಭಗಳಲ್ಲಿ ವಾಹನಕ್ಕೆ ಆಗಬಹುದಾದ ನಷ್ಟ ಪರಿಹಾರಕ್ಕಾಗಿ ವಿಮಾ ಮಾಡಿಸಲಾಗುತ್ತದೆ. ಆದರೆ ಎದುರುದಾರ ವಿಮಾ ಕಂಪನಿಯವರು ಎಲ್ಲ ದಾಖಲೆಗಳನ್ನು ಕೊಟ್ಟರೂ ದೂರುದಾರರ ವಿಮಾ ಹಣಕೊಡದೇ ಇರುವುದು ಗ್ರಾಹಕ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನತೆ ಆಗುತ್ತದೆ ಎಂದು ಆಯೋಗ ಅಭಿಪ್ರಾಯಪಟ್ಟು ತೀರ್ಪು ನೀಡಿದೆ.

ವಿಮಾ ಪಾಲಿಸಿ ನಿಯಮದಂತೆ ದೂರುದಾರರ ಕಾರಿಗೆ ಆಗಿರುವ ರೂ.3 ಲಕ್ಷ ಪರಿಹಾರ ಕೊಡುವಂತೆ ಆಯೋಗ ಆದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲ ಹಾಗೂ ಮಾನಸಿಕ ತೊಂದರೆಗಾಗಿ ರೂ.10,000 ಪರಿಹಾರ ಮತ್ತು ರೂ.10,000 ಪ್ರಕರಣದ ಖರ್ಚು ವೆಚ್ಚ ಕೊಡುವಂತೆ ಆಯೋಗ ವಿಮಾ ಕಂಪನಿಗೆ ನಿರ್ದೇಶಿಸಿದೆ.

### ಮುಂಗಾರು ಮಳೆ ಪೂರ್ವ ಸಿದ್ಧತೆ ಕಾಮಗಾರಿ

## ಜಿಲ್ಲಾಧಿಕಾರಿಗಳಿಂದ ಕಾಮಗಾರಿ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ಮುಂಗಾರು ಮಳೆ ಪೂರ್ವ ಸಿದ್ಧತೆ ಹಿನ್ನೆಲೆಯಲ್ಲಿ ಗದಗ–ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿನ ಮಳೆ ನೀರು ಚರಂಡಿಗಳ ಮತ್ತು ರಾಜಕಾಲುವೆಗಳಲ್ಲಿ ಹೂಳು ತುಂಬಿದ್ದು, ಹೂಳು ತೆಗೆಯಲು ಮತ್ತು ಮುಳ್ಳು ಕಂಟಿಗಳನ್ನು ತೆಗೆದು ಸ್ವಚ್ಛತಾ ಕಾರ್ಯ ಕೈಗೊಳ್ಳಲಾಗುತ್ತಿದೆ.

ಸದರಿ ಸ್ವಚ್ಛತಾ ಕಾಮಗಾರಿಯನ್ನು ಶನಿವಾರ ಬೆಳಿಗ್ಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸ್ಥಳ ಪರಿಶೀಲನೆ ಮಾಡಿ ಸೂಕ್ತ ಸಲಹೆ–ಸೂಚನೆಗಳನ್ನು ನೀಡಿದರು. ಹಿಟಾಚಿ ಮತ್ತು ಜೆಸಿಬಿ ವಾಹನಗಳ ಮುಖಾಂತರ ಶೀಘ್ರವಾಗಿ ರಾಜಕಾಲುವೆ ಸ್ವಚ್ಛಗೊಳಿಸಲು ಕ್ರಮ ಜರುಗಿಸಬೇಕು. ಮಳೆ ನೀರು ಸರಾಗವಾಗಿ ಚರಂಡಿ ಹಾಗೂ ರಾಜಕಾಲುವೆ ಮೂಲಕ ಸಾಗಲು ಅನುವು ಮಾಡಿಕೊಡಬೇಕೆಂದು ಸೂಚನೆ ನೀಡಿದರು.



ದೊಡ್ಡ ಮಳೆ ಸುರಿದಾಗ ಮಳೆ ನೀರು ಹರಿಯುವ ಚರಂಡಿಗಳಲ್ಲಿ ಸಾರ್ವಜನಿಕರು ಕಸ ಹಾಗೂ ಕಟ್ಟಡದ ಭಗ್ನಾವಶೇಷಗಳನ್ನು ಎಸೆಯದಂತೆ ನೋಡಿಕೊಳ್ಳಬೇಕು. ಸಮರ್ಪಕವಾಗಿ ತ್ಯಾಜ್ಯ ವಸ್ತುಗಳ ವಿಲೇವಾರಿ ಮಾಡಲು ಸೂಚಿಸಿದರು. ನಂತರ ಗದಗ–ಬೆಟಗೇರಿ ನಗರದಲ್ಲಿ ಸಂಚರಿಸಿ, ಮಾನ್ವಿ ರಾಜನಾಲಾ, ಹೊಸ ಕೋರ್ಟ್ ಹತ್ತಿರದ ರಾಜನಾಲಾ, ಬೆಟಗೇರಿ ಭಾಗದಲ್ಲಿ ಬರುವ ಜರ್ಮನ್ ಹಾಸ್ಪಿಟಲ್ ಹತ್ತಿರದ ರಾಜನಾಲಾ ಮತ್ತು ಹುಯಿಲಗೋಳ ಬ್ರಿಡ್ಜ್ ಹತ್ತಿರದ ರಾಜನಾಲಾ ಸ್ಥಳ ಪರಿಶೀಲನೆ ಮಾಡಿದರು.

ಈ ಸಂದರ್ಭದಲ್ಲಿ ನಗರಸಭೆಯ ಸಹಾಯಕ ಕಾರ್ಯಪಾಲಕ ಪರಿಸರ ಅಭಿಯಂತರ ಆನಂದ ಬದಿ, ನಗರಸಭೆಯ ಆರೋಗ್ಯ ನಿರೀಕ್ಷಕರು, ದಫೇದಾರರು ಹಾಜರಿದ್ದರು.

# ಸ್ವಚ್ಛತೆ ಕುರಿತು ಜಾಗೃತಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಳಸಾಪೂರ ಗ್ರಾಮದ ತಾಂಡಾದಲ್ಲಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ ಗದಗ ವಿದ್ಯಾರ್ಥಿಗಳು 21 ದಿನದ ಗ್ರಾಮ ವಾಸ್ತವ್ಯ ಮತ್ತು ಅಧ್ಯಯನ ಶಿಬಿರವನ್ನು ಹಮ್ಮಿಕೊಂಡಿದ್ದು, ಗ್ರಾಮದ ತಾಂಡಾದಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯ ಕುರಿತಾದ ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.




ಸ್ವಚ್ಛ ಭಾರತ ಮಿಷನ್‌ನ ನೈರ್ಮಲ್ಯ ಮತ್ತು ಶುಚಿತ್ವ ಅಧಿಕಾರಿ ಕೃಷ್ಣ ದೊಡ್ಡಮನಿ ಮಾತನಾಡಿ, ನಮ್ಮ ಸುತ್ತಮುತ್ತಲಿನ ಪರಿಸರವನ್ನು ನಾವು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು. ಅಂದಾಗ ಮಾತ್ರ ರೋಗ–ರುಜಿನಗಳಿಂದ ಮುಕ್ತವಾದ ಜೀವನ ಸಾಗಿಸಲು ಸಾಧ್ಯ. ನೈರ್ಮಲ್ಯ ಮತ್ತು ಶುಚಿತ್ವಕ್ಕಾಗಿ ನಾವು ಎಲ್ಲ ರೀತಿಯ ಸಹಕಾರವನ್ನು ನೀಡುತ್ತೇವೆ ಅದರ ಪ್ರಯೋಜನವನ್ನು ಗ್ರಾಮಸ್ಥರು ಪಡೆಯಬೇಕೆಂದು ಹೇಳಿದರು.

ಬಸವಕೇಂದ್ರದ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಖಂಡಮ್ಮನವರ ಮಾತನಾಡಿ, ಬಸವಣ್ಣನವರು ನಿರಂತರ ವೈಯಕ್ತಿಕ ಆಧ್ಯಾತ್ಮಿಕ ಬೆಳವಣಿಗೆಯನ್ನು ಆಳವಾದ ಜ್ಞಾನೋದಯದ ಮಾರ್ಗವಾಗಿ ಒತ್ತಿ ಹೇಳಿದರು. ಸರ್ವ ಜನಾಂಗಕ್ಕೆ ಜಾತಿ ಬೇಧವನ್ನು ತೊಡೆದು ಹಾಕಿ ಮನುಷ್ಯ ಜನ್ಮ ಸಾರ್ಥಕತೆಯನ್ನು ಪಡೆಯಲು ಜನಸಾಮಾನ್ಯರಿಗೆ ತಿಳಿಯುವ ಹಾಗೆ ಕನ್ನಡ ಭಾಷೆಯಲ್ಲಿ ವಚನಗಳನ್ನು ರಚಿಸಿ ಜನತೆಯಲ್ಲಿ ಜಾಗೃತಿಯನ್ನು ಮೂಡಿಸಿದರು ಎಂದರು.

ಆಶಾ ಕಾರ್ಯಕರ್ತೆ ಬಿ.ಎಚ್. ಓಲೇಕಾರ, ಕೃಷ್ಣಾ ದೊಡ್ಡಮನಿ, ಸುರೇಶ ಲಮಾಣಿ, ಸಿ.ಎ. ಮಾದರ, ಡಿ.ಎಮ್. ಚವ್ಹಾಣ ಉಪಸ್ಥಿತರಿದ್ದರು. ಯಲ್ಲಪ್ಪ ಬ.ಕೊಪ್ಪದ ಸ್ವಾಗತಿಸಿ ನಿರೂಪಿಸಿದರು.

## ಕರವೇ ನೂತನ ಗೌರವ ಜಿಲ್ಲಾಧ್ಯಕ್ಷರ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡದ ನಾಡ ಸೇನಾನಿ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ್ರು ಅವರು ನಿಂಗನಗೌಡ ಎಸ್.ಮಾಲಿಪಾಟೀಲ್ ಅವರನ್ನು ಕರವೇ ಗದಗ ಜಿಲ್ಲಾ ಘಟಕದ ನೂತನ ಗೌರವ ಜಿಲ್ಲಾಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶಿಸಿದ್ದಾರೆ.

ನಿಂಗನಗೌಡ ಎಸ್.ಮಾಲಿಪಾಟೀಲರಿಗೆ ಕರವೇ ಗದಗ ಜಿಲ್ಲಾಧ್ಯಕ್ಷ ಶರಣು ಎಸ್.ಗೋಡಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ಕವಿತಾಗೆ ಜಾಮೀನು ನೀಡಿದರೆ ತನಿಖೆಗೆ ಅಡ್ಡಿ: ಜಾರಿ ನಿರ್ದೇಶನಾಲಯ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಆಪಾದಿತ ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಮನಿ ಲಾಂಡರಿಂಗ್ ಪ್ರಕರಣದಲ್ಲಿ ಬಿಆರ್‌ಎಸ್ ನಾಯಕಿ ಕೆ ಕವಿತಾ ಅವರ ಜಾಮೀನು ಅರ್ಜಿಯನ್ನು ಜಾರಿ ನಿರ್ದೇಶನಾಲಯ (ಇಡಿ) ಶುಕ್ರವಾರ ದೆಹಲಿ ಹೈಕೋರ್ಟ್‌ನಲ್ಲಿ ವಿರೋಧಿಸಿದೆ. "ಅವರ ಬಿಡುಗಡೆಯು ಮುಂದಿನ ತನಿಖೆಯ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ" ಎಂದು ಹೇಳಿದೆ.

ಕವಿತಾ ಅವರ ಜಾಮೀನು ಅರ್ಜಿಗೆ ಉತ್ತರ ನೀಡಿರುವ ಇಡಿ, "ತೆಲಂಗಾಣ ಶಾಸಕರು ಅತ್ಯಂತ ಪ್ರಭಾವಿ ವ್ಯಕ್ತಿಯಾಗಿದ್ದಾರೆ; ಗಂಭೀರ ಆರ್ಥಿಕ ಅಪರಾಧ ಎಸಗಿದ್ದಾರೆ. ಆಕೆ ಸಾಕ್ಷಿಯನ್ನು ಹಾಳುಮಾಡುವ ಮತ್ತು ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಸಾಮರ್ಥ್ಯವನ್ನು ಹೊಂದಿದ್ದಾರೆ" ಎಂದು ವಾದಿಸಿದೆ.

"ಕೆ. ಕವಿತಾ ಇತರ ಜನರೊಂದಿಗೆ ಪಿತೂರಿ ನಡೆಸಿದ್ದಾರೆ ಮತ್ತು 100 ಕೋಟಿಗಳಷ್ಟು ಕಿಕ್‌ಬ್ಯಾಕ್ ಪಾವತಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ನಂತರ ಮನಿ ಲಾಂಡರಿಂಗ್ ಪರಿಸರ ವ್ಯವಸ್ಥೆಯನ್ನು ಸ್ಥಾಪಿಸುವಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಅಂದರೆ, ತನ್ನ ಪ್ರಾಕ್ಸಿ ಮೂಲಕ ಅಪರಾಧದ ಆದಾಯವನ್ನು ಗಳಿಸಿದ ಎಂಎಸ್ ಇಂಡೋ ಸ್ಪಿರಿಟ್ಸ್ ಇಂತಹ ಕೃತ್ಯಗಳ ಮೂಲಕ, ಕೆ ಕವಿತಾ ಅವರು 292.8 ಕೋಟಿಗಳಷ್ಟು ಅಪರಾಧದ ಆದಾಯಕ್ಕೆ (ಪಿಒಸಿ) ಸಂಬಂಧಿಸಿದ ವಿವಿಧ ಪ್ರಕ್ರಿಯೆಗಳು ಮತ್ತು ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ" ಎಂದು ತನಿಖಾ ಸಂಸ್ಥೆ ತನ್ನ ಅಫಿಡವಿಟ್‌ನಲ್ಲಿ ತಿಳಿಸಿದೆ.

ಶುಕ್ರವಾರ, ನ್ಯಾಯಮೂರ್ತಿ ಸ್ವರಣಾ ಕಾಂತ ಶರ್ಮಾ ಅವರು ಕವಿತಾ ಅವರ ವಕೀಲರು ಮಂಡಿಸಿದ ವಾದಗಳ ಭಾಗವನ್ನು ಆಲಿಸಿದರು; ಮೇ 27 ರಂದು ಮುಂದಿನ ವಿಚಾರಣೆಗೆ ವಿಷಯವನ್ನು ಪಟ್ಟಿ ಮಾಡಿದರು. ಸಿಬಿಐನ ಭ್ರಷ್ಟಾಚಾರ ಪ್ರಕರಣ ಹಾಗೂ ಇಡಿ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜಾಮೀನು ಅರ್ಜಿಯನ್ನು ವಜಾಗೊಳಿಸಿದ ವಿಚಾರಣಾ ನ್ಯಾಯಾಲಯದ ಮೇ 6 ರ ಆದೇಶವನ್ನು ಕವಿತಾ ಪ್ರಶ್ನಿಸಿದ್ದಾರೆ.

ಬಿಆರ್‌ಎಸ್ ನಾಯಕನ ವಕೀಲರು ಅಬಕಾರಿ ಪ್ರಕರಣದ 50 ಆರೋಪಿಗಳಲ್ಲಿ ಅವಳು ಒಬ್ಬಂಟಿ ಮಹಿಳೆ ಎಂದು ಸಲ್ಲಿಸಿದರು. ಕಾನೂನು ಮಹಿಳೆಯರನ್ನು ಬೇರೆ ಪೀಠದಲ್ಲಿ ಇರಿಸಿರುವುದರಿಂದ ಅವರಿಗೆ ಜಾಮೀನು ನೀಡುವ ಬಗ್ಗೆ ಪರಿಗಣಿಸುವಂತೆ ನ್ಯಾಯಾಲಯವನ್ನು ಒತ್ತಾಯಿಸಿದರು.

ಸಹ ಆರೋಪಿ ಅರುಣ್ ರಾಮಚಂದ್ರನ್ ಪಿಳ್ಳೈ ಸಲ್ಲಿಸಿದ ಮತ್ತೊಂದು ಅರ್ಜಿಯಲ್ಲಿ, ಭ್ರಷ್ಟಾಚಾರ ಪ್ರಕರಣದಲ್ಲಿ ಆಪಾದಿತ ಪಾತ್ರಕ್ಕಾಗಿ ಜೂನ್ ಮೊದಲ ವಾರದೊಳಗೆ ಎಂಎಸ್ ಕವಿತಾ ವಿರುದ್ಧ ಆರೋಪಪಟ್ಟಿ ಸಲ್ಲಿಸುವ ಸಾಧ್ಯತೆಯಿದೆ ಎಂದು ಸಿಬಿಐ ಹೈಕೋರ್ಟ್‌ಗೆ ತಿಳಿಸಿದೆ.

ಹೈದರಾಬಾದ್ ಮೂಲದ ಉದ್ಯಮಿ ಪಿಳ್ಳೈ ಅವರು ಸಿಬಿಐ ತನಿಖೆಯ ಮುಕ್ತಾಯದವರೆಗೆ ಆರೋಪದ ಮೇಲಿನ ವಾದವನ್ನು ಪ್ರಾರಂಭಿಸುವುದರ ವಿರುದ್ಧದ ತನ್ನ ಮನವಿಯನ್ನು ವಜಾಗೊಳಿಸುವ ವಿಚಾರಣಾ ನ್ಯಾಯಾಲಯದ ಆದೇಶವನ್ನು ರದ್ದುಗೊಳಿಸುವಂತೆ ಕೋರಿದ್ದಾರೆ.

## ಕೇರಳದಲ್ಲಿ ಭಾರೀ ಮಳೆಗೆ 11 ಸಾವು; 7 ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್



■ವಿಜಯಸಾಕ್ಷಿ ಸುದ್ದಿ, ಕೇರಳ

ಉತ್ತರ ಭಾರತದಲ್ಲಿ ಬಿಸಿಲಿನ ಶಾಖ ಹೆಚ್ಚಾಗಿದ್ದು, ಬಿಸಿಗಾಳಿಗೆ ಜನರು ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಇತ್ತ, ದಕ್ಷಿಣ ಭಾರತದ ಕೇರಳದಲ್ಲಿ ಮಳೆ ತೀವ್ರಗೊಂಡಿದೆ. ಈವರೆಗೆ ಮಳೆ ಸಬಂಧಿತ 11 ಸಾವುಗಳು ವರದಿಯಾಗಿದ್ದು, ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಕೇರಳದ ಏಳು ಜಿಲ್ಲೆಗಳಿಗೆ ಶನಿವಾರ ಹಳದಿ ಅಲರ್ಟ್ ಘೋಷಿಸಿದ್ದು, ರಾಜ್ಯದಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ.

ಯೆಲ್ಲೋ ಎಚ್ಚರಿಕೆಯು ತಿರುವನಂತಪುರಂ, ಕೊಲ್ಲಂ, ಅಲಪ್ಪುಳ, ಎರ್ನಾಕುಲಂ, ಕೋಝಿಕ್ಕೋಡ್, ಕಣ್ಣೂರು ಮತ್ತು ಕಾಸರಗೋಡು ಜಿಲ್ಲೆಗಳಿಗೆ ಅನ್ವಯಿಸುತ್ತದೆ. 6 ಸೆಂ.ಮೀ ನಿಂದ 11 ಸೆಂ.ಮೀ ನಡುವೆ ಮಳೆಯಾಗುವ ನಿರೀಕ್ಷೆಯಿದೆ.

ರಾಜ್ಯ ಕಂದಾಯ ಸಚಿವ ಕೆ. ರಾಜನ್ ಪ್ರಕಾರ, ಮೇ 9 ರಿಂದ ಮೇ 23 ರವರೆಗೆ ಕೇರಳದಲ್ಲಿ ಕನಿಷ್ಠ 11 ಮಳೆ ಸಂಬಂಧಿತ ಸಾವುಗಳು ವರದಿಯಾಗಿದೆ. ಇವುಗಳಲ್ಲಿ ಆರು ಮುಳುಗುವಿಕೆಗಳು, ಎರಡು ಕ್ವಾರಿ ಅಪಘಾತಗಳು, ಎರಡು ಸಿಡಿಲು ಬಡಿತಗಳು ಮತ್ತು ಒಂದು ಮನೆ ಕುಸಿತ ಪ್ರಕರಣ ಸೇರಿವೆ.

ಶನಿವಾರದ ನಂತರ ರಾಜ್ಯದಲ್ಲಿ ಮಳೆಯ ಪ್ರಮಾಣ ಸ್ವಲ್ಪಮಟ್ಟಿಗೆ ಕಡಿಮೆಯಾಗುವ ಮುನ್ಸೂಚನೆ ಇದೆ ಎಂದು ತಿಳಿಸಿದ ಸಚಿವರು, ಜಲಮೂಲಗಳು ಮತ್ತು ಕರಾವಳಿ ಪ್ರದೇಶಗಳನ್ನು ತಪ್ಪಿಸುವಂತೆ ಜನರನ್ನು ಒತ್ತಾಯಿಸಿದರು. ರಜೆಯ ಅವಧಿಯಲ್ಲಿ ವ್ಯಕ್ತಿಗಳು, ವಿಶೇಷವಾಗಿ ಮಕ್ಕಳು, ಜಲಮೂಲಗಳಿಗೆ ಪ್ರವೇಶಿಸುವುದನ್ನು ವಿರೋಧಿಸುವ ಅಗತ್ಯವನ್ನು ಅವರು ಒತ್ತಿ ಹೇಳಿದರು.


ಸ್ಥಳೀಯ ಅಧಿಕಾರಿಗಳು, ಅಗ್ನಿಶಾಮಕ ಇಲಾಖೆ, ಪೊಲೀಸ್ ಮತ್ತು ಕಂದಾಯ ಇಲಾಖೆಯು ಯಾವುದೇ ತುರ್ತು ಪರಿಸ್ಥಿತಿಯನ್ನು ನಿಭಾಯಿಸಲು ಹೆಚ್ಚಿನ ಅಲರ್ಟ್‌ನಲ್ಲಿದೆ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್) ಯ ಎರಡು ತಂಡಗಳನ್ನು ರಾಜ್ಯದಲ್ಲಿ ನಿಯೋಜಿಸಲಾಗಿದೆ ಎಂದರು.

ಶುಕ್ರವಾರ ಸಂಜೆಯ ಹೊತ್ತಿಗೆ, ರಾಜ್ಯಾದ್ಯಂತ ಎಂಟು ಪರಿಹಾರ ಶಿಬಿರಗಳಲ್ಲಿ 223 ಜನರಿಗೆ ವಸತಿ ಕಲ್ಪಿಸಲಾಗಿದೆ.





ಮುಂಗಾರು ಮಳೆ ಪೂರ್ವ ಸಿದ್ಧತೆ ಹಿನ್ನೆಲೆಯಲ್ಲಿ ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿನ ಮಳೆ ನೀರು ಚರಂಡಿಗಳ ಮತ್ತು ರಾಜಕಾಲುವೆಗಳಲ್ಲಿ ಹೂಳು ತೆಗೆದು ಸ್ವಚ್ಛಗೊಳಿಸುವ ಕಾಮಗಾರಿಯನ್ನು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ವೀಕ್ಷಿಸಿ ಸೂಚನೆಗಳನ್ನು ನೀಡಿದರು. ನಗರಸಭೆಯ ಸಹಾಯಕ ಕಾರ್ಯಪಾಲಕ ಪರಿಸರ ಅಭಿಯಂತರ ಆನಂದ ಬದಿ, ನಗರಸಭೆಯ ಆರೋಗ್ಯ ನಿರೀಕ್ಷಕರು, ದಫೇದಾರರು ಹಾಜರಿದ್ದರು.





## ವಚನ-ವಾಚನ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಪಾಲಾ ಬಾದಾಮಿ ರಸ್ತೆ ಹೊಂದಿಕೊಂಡಿರುವ ದೇವರ ದಾಸಿಮಯ್ಯ ಮೂರ್ತಿ ಆವರಣದಲ್ಲಿ 16ನೇ ವಚನ-ವಾಚನ ಕಾರ್ಯಕ್ರಮವನ್ನು ಆಗಿ ಹುಣ್ಣಿಮೆ ದಿನದಂದು ನೆರವೇರಿಸಲಾಯಿತು.

ಮಾರುತಿ ಸೂರಿ ದೇವರ ದಾಸಿಮಯ್ಯನವರ ಪುತ್ಥಳಿಗೆ ಪೂಜೆ ಸಲ್ಲಿಸಿದರು. ಸಾಹಿತಿ ರಾಮಚಂದ್ರ ಹುಬ್ಬಳ್ಳಿ ಹಾಗೂ ಬಿ.ಹಿಂಡಿ ವಚನ ವಾಚನ ಮಾಡಿದರು. ಈ ಸಂದರ್ಭದಲ್ಲಿ ಶ್ರೀನಿವಾಸ ಹುಬ್ಬಳ್ಳಿ ಮಾತನಾಡಿ, ಶತಮಾನಗಳಿಂದ ನೇಕಾರಿಕೆಯನ್ನು ಉಳಿಸಿಕೊಂಡು ಬಡತನದಲ್ಲಿಯೇ ಸಾಂಪ್ರದಾಯಿಕ ಬದುಕು ಸಾಗಿಸುತ್ತಾ ಸಾಮಾಜಿಕ ಹಾಗೂ ರಾಜಕೀಯ ರಂಗದಲ್ಲಿ ಪಕ್ಷಪಾತ ಮಾಡದೆ ಹಲವಾರು ಪಕ್ಷಗಳಲ್ಲಿ ನಮ್ಮ ಸಮಾಜದ ನಾಯಕರು ರಾಜಕಾರಣಿಗಳ ಜೊತೆಗೆ ಪ್ರಾಮಾಣಿಕವಾಗಿ ಬೆಂಬಲವನ್ನು ನೀಡಿ ಶಕ್ತಿ ತುಂಬುತ್ತಾ ಬಂದಿದ್ದಾರೆ. ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿರುವ ನೇಕಾರ ಸಮಾಜಗಳಿಗೆ ರಾಜಕೀಯ ಧ್ವನಿ ನೀಡಬೇಕಾದದ್ದು ರಾಷ್ಟ್ರ ಮತ್ತು ರಾಜ್ಯಮಟ್ಟದ ಪಕ್ಷಗಳ ಜವಾಬ್ದಾರಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಅಶೋಕ ಬಣ್ಣದ, ವಸಂತ ಇಂಜಿನಿ, ನಾರಾಯಣ ಕಂಗೊರಿ, ಅನಿಲ ಗಡ್ಡಿ, ಸಂಕಣ್ಣ ಹಾದಿಮನಿ, ಶಿವರಾಮ ಚಳಗೇರಿ ನಾಗರಾಜ ಬಣ್ಣದ, ಶಿಗ್ಗಿ ಬಸವ, ಶಂಕ್ರಪ್ಪ ಗಂಜಿ ಮುಂತಾದವರು ಭಾಗವಹಿಸಿದ್ದರು.

## ಅನಂತನಾಗ್-ರಾಜೌರಿ ಕ್ಷೇತ್ರದಲ್ಲಿ ಚುನಾವಣಾ ರಿಗ್ಗಿಂಗ್; ಮೆಹಬೂಬಾ ಮುಫ್ತಿ ಆರೋಪ

■ವಿಜಯಸಾಕ್ಷಿ ಸುದ್ದಿ, ಜಮ್ಮು /ಕಾಶ್ಮೀರ

"ತಮ್ಮ ಪಕ್ಷದ ಕಾರ್ಯಕರ್ತರು ಮತ್ತು ಪೋಲಿಂಗ್ ಏಜೆಂಟರನ್ನು ಯಾವುದೇ ಕಾರಣವಿಲ್ಲದೆ ಪೊಲೀಸ್ ಠಾಣೆಗಳಲ್ಲಿ ಬಂಧಿಸಲಾಗುತ್ತಿದೆ" ಎಂದು ಜಮ್ಮು ಮತ್ತು ಕಾಶ್ಮೀರ ಪೀಪಲ್ಸ್ ಡೆಮಾಕ್ರಟಿಕ್ ಪಾರ್ಟಿಯ ಮೆಹಬೂಬಾ ಮುಫ್ತಿ ಆರೋಪಿಸಿದ್ದಾರೆ.

ಇವಿಎಂಗಳನ್ನು ಟ್ಯಾಂಪರ್ ಮಾಡುವ ಪ್ರಯತ್ನಗಳ ಬಗ್ಗೆ ದೂರುಗಳು ಬರುತ್ತಿವೆ ಎಂದು ಮೆಹಬೂಬಾ ಮುಫ್ತಿ ಹೇಳಿದ್ದಾರೆ.

ಜಮ್ಮು ಮತ್ತು ಕಾಶ್ಮೀರ ಪೀಪಲ್ಸ್ ಡೆಮಾಕ್ರಟಿಕ್ ಪಾರ್ಟಿ(ಪಿಡಿಪಿ) ಅಧ್ಯಕ್ಷೆ ಮೆಹಬೂಬಾ ಮುಫ್ತಿ ಅವರು ಶನಿವಾರ ಶ್ರೀನಗರದ ದಕ್ಷಿಣ ಬಿಜೆಹರಾದಲ್ಲಿ ಲೋಕಸಭಾ ಚುನಾವಣೆಯ ಆರನೇ ಸುತ್ತಿನ ಮತದಾನದ ಮೊದಲು ತಮ್ಮ ಪಕ್ಷದ ಕಾರ್ಯಕರ್ತರನ್ನು ಬಂಧಿಸಿರುವುದನ್ನು ವಿರೋಧಿಸಿ ತಮ್ಮ ಬೆಂಬಲಿಗರೊಂದಿಗೆ ರಸ್ತೆ ತಡೆ ನಡೆಸಿದರು.



ಪ್ರಸ್ತುತ ಮತದಾನ ನಡೆಯುತ್ತಿರುವ ದಕ್ಷಿಣ ಕಾಶ್ಮೀರದ ಅನಂತನಾಗ್-ರಾಜೌರಿ ಲೋಕಸಭಾ ಕ್ಷೇತ್ರದಿಂದ ಅಭ್ಯರ್ಥಿಯಾಗಿರುವ ಮೆಹಬೂಬಾ ಮುಫ್ತಿ ಅವರು ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರೊಂದಿಗೆ ಪ್ರತಿಭಟನೆಯಲ್ಲಿ ನಡೆಸಿದರು.

ಪಿಡಿಪಿ ಅಧ್ಯಕ್ಷರು ತಮ್ಮ ಮೊಬೈಲ್ ಸಂಖ್ಯೆಗೆ ಹೊರಹೋಗುವ ಕರೆಗಳನ್ನು ಯಾವುದೇ ವಿವರಣೆಯಿಲ್ಲದೆ ಅಮಾನತುಗೊಳಿಸಲಾಗಿದೆ ಎಂದು ಹೇಳಿದ್ದಾರೆ.

"ಬೆಳಿಗ್ಗೆಯಿಂದ ನನಗೆ ಯಾವುದೇ ಕರೆ ಮಾಡಲು ಸಾಧ್ಯವಾಗುತ್ತಿಲ್ಲ. ಅನಂತನಾಗ್ ಲೋಕಸಭಾ ಕ್ಷೇತ್ರದಲ್ಲಿ ಮತದಾನದ ದಿನದಂದು ಈ ಹಠಾತ್ ಸೇವೆಗಳನ್ನು ಸ್ಥಗಿತಗೊಳಿಸಿದ್ದಕ್ಕೆ ಯಾವುದೇ ಕಾರಣವಿಲ್ಲ" ಎಂದು ಮೆಹಬೂಬಾ ಮುಫ್ತಿ ತಿಳಿಸಿದ್ದಾರೆ.

ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪಿಡಿಪಿ ಸಹ ಸಮಸ್ಯೆ ಬಗ್ಗೆ ಧ್ವನಿ ಎತ್ತಿದೆ. "ಚುನಾವಣೆಗೆ ಸ್ವಲ್ಪ ಮುಂಚಿತವಾಗಿ, ಮೆಹಬೂಬಾ ಮುಫ್ತಿ ಅವರ ಸೆಲ್ಯುಲಾರ್ ಫೋನ್ ಸೇವೆಯನ್ನು ಹಠಾತ್ತನೆ ಸ್ಥಗಿತಗೊಳಿಸಲಾಗಿದೆ. ನಿನ್ನೆ ಸಂಜೆ ಮತ್ತು ಇಂದು ಮುಂಜಾನೆ, ಪಿಡಿಪಿ ಕಾರ್ಯಕರ್ತರು ಮತ್ತು ಪೋಲಿಂಗ್ ಏಜೆಂಟ್‌ಗಳನ್ನು ವ್ ತ ಗ ಟ್ಟೆ ಂ ು ಾ ದ್ಯ ಂ ತ ಬಂಧಿಸಲಾಗಿದೆ" ಎಂದು ಪಕ್ಷ ಆರೋಪ ಮಾಡಿದೆ.

ಶುಕ್ರವಾರ, ಮೆಹಬೂಬಾ ಮುಫ್ತಿ ಅವರು ಚುನಾವಣಾ ಆಯೋಗಕ್ಕೆ ಪತ್ರ ಬರೆದು ಪಿಡಿಪಿ ಕಾರ್ಯಕರ್ತರು ಮತ್ತು ಪೋಲಿಂಗ್ ಏಜೆಂಟರನ್ನು ಪೊಲೀಸರು ಬಂಧಿಸಿದ್ದಾರೆ ಎಂದು ಹೇಳಿದ್ದಾರೆ.

## ನಿಮ್ಮ ದೇಶದ ಬಗ್ಗೆ ಕಾಳಜಿ ವಹಿಸಿ: ಕೇಜ್ರಿವಾಲ್ ತಿರುಗೇಟು

■ವಿಜಯಸಾಕ್ಷಿ ಸುದ್ದಿ, ಜಮ್ಮು /ಕಾಶ್ಮೀರ

ಭಾರತದಲ್ಲಿ ಸಾರ್ವತ್ರಿಕ ಚುನಾವಣೆ ಕುರಿತು ಹೇಳಿಕೆ ನೀಡಿರುವ ಪಾಕಿಸ್ತಾನದ ಮಾಜಿ ಸಚಿವ ಫವಾದ್ ಹುಸೇನ್ ಅವರನ್ನು ತರಾಟೆಗೆ ತೆಗೆದುಕೊಂಡ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, "ಪಾಕಿಸ್ತಾನದಲ್ಲಿ ಪರಿಸ್ಥಿತಿ ತುಂಬಾ ಕೆಟ್ಟದಾಗಿದೆ; ಅವರು ಅದನ್ನು ನೋಡಿಕೊಳ್ಳಬೇಕು" ಎಂದು ಹೇಳಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪಾಕಿಸ್ತಾನದ ಮಾಜಿ ಸಚಿವ ಫವಾದ್ ಹುಸೇನ್, ಮತದಾನದ ಕುರಿತು ಕೇಜ್ರಿವಾಲ್ ಅವರ ಪೋಸ್ಟ್‌ಗೆ ಪ್ರತಿಕ್ರಿಯಿಸಿದ್ದಾರೆ, "ಶಾಂತಿ ಮತ್ತು ಸಾಮರಸ್ಯವು ದ್ವೇಷ ಮತ್ತು ಉಗ್ರವಾದದ ಶಕ್ತಿಗಳನ್ನು ಸೋಲಿಸಲಿ" ಎಂದು ಹೇಳಿದರು.

ಅದಕ್ಕೆ ಪ್ರತಿಕ್ರಿಯಿಸಿದ ಕೇಜ್ರಿವಾಲ್, "ಚೌಧರಿ ಸಾಹಬ್, ನಾನು ಮತ್ತು ನನ್ನ ದೇಶದ ಜನರು ನಮ್ಮ ಸಮಸ್ಯೆಗಳನ್ನು ನಿಭಾಯಿಸಲು ಸಂಪೂರ್ಣವಾಗಿ ಸಮರ್ಥರಾಗಿದ್ದೇವೆ; ನಿಮ್ಮ ಟ್ವೀಟ್ ಅಗತ್ಯವಿಲ್ಲ. ಪಾಕಿಸ್ತಾನದ ಪರಿಸ್ಥಿತಿ ಈಗ ತುಂಬಾ ಕೆಟ್ಟದಾಗಿದೆ. ನಿಮ್ಮ ದೇಶವನ್ನು ನೀವು ನೋಡಿಕೊಳ್ಳಿ" ಎಂದು ಪ್ರತಿಕ್ರಿಯಿಸಿದ್ದಾರೆ.

"ಭಾರತದಲ್ಲಿ ನಡೆಯುತ್ತಿರುವ ಚುನಾವಣೆಗಳು ನಮ್ಮ ಆಂತರಿಕ ವಿಷಯವಾಗಿದೆ. ಭಯೋತ್ಪಾದನೆಯ ದೊಡ್ಡ ಪ್ರಾಯೋಜಕರ ಹಸ್ತಕ್ಷೇಪವನ್ನು ಭಾರತ ಸಹಿಸುವುದಿಲ್ಲ" ಎಂದು ಕೇಜ್ರಿವಾಲ್ ಹೇಳಿದರು.

## ರಾಜ್‌ಕೋಟ್‌ನ ಗೇಮಿಂಗ್ ಝೋನ್‌ನಲ್ಲಿ ಭಾರೀ ಬೆಂಕಿ ಅವಘಡ; 20 ಜನರ ಸಾವು



■ವಿಜಯಸಾಕ್ಷಿ ಸುದ್ದಿ, ಗುಜರಾತ್

ಗುಜರಾತ್‌ನ ರಾಜ್‌ಕೋಟ್‌ನ ಗೇಮಿಂಗ್ ಝೋನ್‌ನಲ್ಲಿ ಶನಿವಾರ ಸಂಜೆ ಭಾರೀ ಬೆಂಕಿ ಅವಘಡವೊಂದು ಸಂಭವಿಸಿದ್ದು, ಈವರೆಗೆ 20 ಜನರು ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸ್ಥಳದಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆ ನಡೆಯುತ್ತಿರುವುದಾಗಿ ವರದಿಯಾಗಿದೆ.

ಘಟನೆಯಲ್ಲಿ ಈವರೆಗೆ 20 ಮಂದಿ ಮೃತಪಟ್ಟಿರುವುದಾಗಿ ತಿಳಿದುಬಂದಿದೆ. ಮೃತಪಟ್ಟವರ ಪೈಕಿ ಹೆಚ್ಚಿನವರು ಗೇಮಿಂಗ್ ಝೋನ್‌ನಲ್ಲಿ ಆಡಲು ಬಂದಿದ್ದ ಮಕ್ಕಳು ಎಂದು ತಿಳಿದುಬಂದಿದೆ. ಮೃತಪಟ್ಟವರ ವಿವರ ಇನ್ನೂ ಲಭ್ಯವಾಗಿಲ್ಲ.

ಘಟನಾ ಸ್ಥಳಕ್ಕೆ ಹಲವು ಅಗ್ನಿಶಾಮಕ ಸಿಬ್ಬಂದಿಗಳು ಧಾವಿಸಿದ್ದು, ಬೆಂಕಿ ನಂದಿಸುವ ಪ್ರಯತ್ನ ಮುಂದುವರಿದಿದೆ. ಬೆಂಕಿ ಅವಘಡಕ್ಕೆ ಇನ್ನೂ ಕಾರಣ ತಿಳಿದುಬಂದಿಲ್ಲ. ಬೆಂಕಿ ನಂದಿಸುವ ಪ್ರಯತ್ನ ನಡೆಯುತ್ತಿದೆ. ಗಾಳಿಯ ವೇಗದಿಂದಾಗಿ ಅಗ್ನಿಶಾಮಕ ಕಾರ್ಯಾಚರಣೆಯಲ್ಲಿ ತೊಂದರೆ ಎದುರಿಸುತ್ತಿದ್ದೇವೆ ಎಂದು ಅಗ್ನಿಶಾಮಕ ಅಧಿಕಾರಿ ಹೇಳಿರುವುದಾಗಿ ವರದಿ ಮಾಡಿದೆ.

## ಕೆಪಿಸಿಸಿ ಅಧ್ಯಕ್ಷ ಸ್ಥಾನ ಸಿಕ್ಕರೆ, ಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲು ಸಿದ್ಧ: ಸಚಿವ ಕೆ ಎನ್ ರಾಜಣ್ಣ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಅಧ್ಯಕ್ಷರ ಬದಲಾವಣೆ ಸನ್ನಿವೇಶ ಎದುರಾದರೆ ನಾನು ಅಧ್ಯಕ್ಷನಾಗಲು ಸಿದ್ಧನಿದ್ದೇನೆ. ಅಧ್ಯಕ್ಷ ಸ್ಥಾನ ಸಿಕ್ಕರೆ ಮಂತ್ರಿ ಸ್ಥಾನ ಬಿಡಲು ನಾನು ತಯಾರಿದ್ದೇನೆ. ನಾನು ಮುಂದೆ ಯಾವುದೇ ಚುನಾವಣೆಗಳಲ್ಲಿ ಸ್ಪರ್ಧಿಸುವುದಿಲ್ಲ. ಅಧ್ಯಕ್ಷ ಸ್ಥಾನ ಸಿಕ್ಕರೆ ಪಕ್ಷಕ್ಕಾಗಿ ದುಡಿಯುತ್ತೇನೆ" ಎಂದರು.

## ಬಿಜೆಪಿ ಮತ್ತೊಮ್ಮೆ ಚುನಾವಣೆಯಲ್ಲಿ ವಿಜಯ ಸಾಧಿಸುತ್ತದೆ: ಯೋಗೇಂದ್ರ ಯಾದವ್



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪ್ರಸಿದ್ಧ ರಾಜಕೀಯ ತಜ್ಞ ಪ್ರಶಾಂತ್ ಕಿಶೋರ್ ಮತ್ತು ಯುಎಸ್ ಸಮೀಕ್ಷೆ ತಜ್ಞ ಇಯಾನ್ ಬ್ರೆಮ್ಮರ್ ನಂತರ, ಮತ್ತೋರ್ವ ಚುನಾವಣಾ ವಿಶ್ಲೇಷಕ ಯೋಗೇಂದ್ರ ಯಾದವ್ ಈಗ ಭಾರತೀಯ ಜನತಾ ಪಕ್ಷವು (ಬಿಜೆಪಿ) ಮತ್ತೊಮ್ಮೆ ಸಾರ್ವತ್ರಿಕ ಚುನಾವಣೆಯಲ್ಲಿ ವಿಜಯ ಸಾಧಿಸುತ್ತದೆ ಎಂದು ಭವಿಷ್ಯ ನುಡಿದಿದ್ದಾರೆ. ಇದು ಚುನಾವಣಾ ಪುನರುಜ್ಜೀವನದ ಕಾಂಗ್ರೆಸ್ ಪಕ್ಷದ ಭರವಸೆಯನ್ನು ನುಚ್ಚುನೂರು ಮಾಡಿದೆ.

ಆದಾಗ್ಯೂ, ನಡೆಯುತ್ತಿರುವ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸಮಾಧಾನ ತರಲಿದ್ದು, ಅದರ ಸ್ಥಾನಗಳ ಸಂಖ್ಯೆ 100 ದಾಟಬಹುದು ಎಂದು ಅಂದಾಜಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, "ಈ ಹೊಸ ವೀಡಿಯೊದಲ್ಲಿ, ಚುನಾವಣಾ ಟ್ರೆಂಡ್‌ಗಳ ಅಂತಿಮ ಮೌಲ್ಯಮಾಪನವನ್ನು ಪ್ರಸ್ತುತಪಡಿಸಲಾಗಿದೆ. 400 ಅಥವಾ 303 ಅನ್ನು ಮರೆತುಬಿಡಿ, ಬಿಜೆಪಿ 272 ಅನ್ನು ದಾಟುವುದಿಲ್ಲ. ಗಾಳಿ ಹೆಚ್ಚು ಬಲವಾಗಿ ಬೀಸಿದರೆ, ಎನ್‌ಡಿಎಗೆ ಬಹುಮತ ಸಿಗದಿರುವ ಸಾಧ್ಯತೆಯಿದೆ" ಎಂದು ಹೇಳಿದ್ದಾರೆ.

### ಉನ್ನತಿ ಟ್ಯುಟೋರಿಯಲ್ ವತಿಯಿಂದ ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ

# ಅಂಕ ಗಳಿಕೆಯೊಂದೇ ಪರಿಪೂರ್ಣತೆಯಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಉನ್ನತಿ ಟ್ಯುಟೋರಿಯಲ್ ನಗರದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಅತ್ಯುತ್ತಮ ಕೋಚಿಂಗ್ ಕೇಂದ್ರವಾಗಿದೆ. ಪ್ರತಿ ವರ್ಷ ಹಲವಾರು ವಿದ್ಯಾರ್ಥಿಗಳು ಈ ಟ್ಯುಟೋರಿಯಲ್‌ನಲ್ಲಿ ಕೋಚಿಂಗ್ ಪಡೆದು ಉತ್ತಮ ಅಂಕ ಪಡೆದು ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ರ‍್ಯಾಂಕ್ ಗಳಿಸುತ್ತಿದ್ದಾರೆ. ಇಲ್ಲಿ ವಿದ್ಯಾರ್ಥಿಗಳಿಗೆ ಪಾಠದೊಂದಿಗೆ ಶಿಸ್ತು, ನಡತೆ, ವ್ಯವಸ್ಥಿತ ಓದುವ ಕ್ರಮ, ದೈಹಿಕ ಹಾಗೂ ಮಾನಸಿಕ ಪ್ರಬುದ್ಧತೆಯ ಜ್ಞಾನದ ಧಾರೆಯನ್ನು ಎರೆಯುತ್ತಿದ್ದಾರೆ ಎಂದು ವಿದ್ಯಾದಾನ ಸಮಿತಿಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಮೆಚ್ಚುಗೆ ವ್ಯಕ್ತಪಡಿಸಿದರು.



ನಗರದ ಉನ್ನತಿ ಟ್ಯುಟೋರಿಯಲ್ ವತಿಯಿಂದ 2023-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರ‍್ಯಾಂಕ್ ಗಳಿಸಿದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ ಅಂಕ ಗಳಿಕೆ ಒಂದಿದ್ದರೆ ಮಾತ್ರ ಜೀವನ ಪರಿಪೂರ್ಣ ಅಲ್ಲ. ಜೊತೆಗೆ ಉತ್ತಮ ವ್ಯಕ್ತಿತ್ವ ಬೇಕು, ಅಂಕದ ಜೊತೆಗೆ ವಿನಯವೂ ಬೇಕು. ನಾವು ದಿನನಿತ್ಯ ಕಲಿಯುತ್ತಲೇ ಇರಬೇಕು. ಅದಕ್ಕಾಗಿ ಕಣ್ಣು, ಕಿವಿ ತೆರೆದಿಡಬೇಕು. ನಾವು ಯಾರಿಂದಲೂ ಕಲಿಯಲು ಇಲ್ಲ ಎನ್ನುವ ಮನಸ್ಥಿತಿ ಇರಬಾರದು ಎಂದ ಅವರು, ನಾವು ಉತ್ತಮ ಮನುಷ್ಯ ಎಂದೆನಿಸಿಕೊಳ್ಳುವುದು ಬಹುದೊಡ್ಡ ಕಾರ್ಯ, ಅಂತಹ ಕಾರ್ಯ ಈ ಟ್ಯುಟೋರಿಯಲ್‌ನಲ್ಲಿ ಕೋಚಿಂಗ್ ತೆಗೆದುಕೊಳ್ಳುತ್ತಿರುವ ವಿದ್ಯಾರ್ಥಿಗಳಿಗೆ ಸಿಗುತ್ತಲಿದೆ ಎಂದರು.

ಟ್ಯುಟೋರಿಯಲ್ ಸಂಸ್ಥಾಪಕರು ಹಾಗೂ ಶಿಕ್ಷಕಿಯರಾದ ರಶ್ಮಿ ಜನ್ನಾ ಹಾಗೂ ವೀಣಾ ಬಾಳಿಹಳ್ಳಿಮಠ ಟ್ಯುಟೋರಿಯಲ್ ಬೆಳೆದುಬಂದ ಹಿನ್ನೆಲೆ ಹಾಗೂ ಸಾಧನೆ ಕುರಿತು ತಮ್ಮ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಕುಬೇರ ಸೂಡಿ ಹಾಗೂ ಚೇತನ್ ಆಲೂರ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳ ಕುರಿತು ಅನಿಸಿಕೆ ವ್ಯಕ್ತಪಡಿಸಿದರು. ರ‍್ಯಾಂಕ್ ಪಡೆದ ವಿದ್ಯಾರ್ಥಿಗಳಾದ ರೇವತಿ ಉತ್ತರಕರ್, ವಿನುತಾ ಕಬ್ಬಿನ, ಸವಿತಾ ಹಳ್ಳಿ, ತಯ್ಯಾಬ ಖಾಜಿ, ಸ್ನೇಹಾ ರುದ್ರಾಪುರಮಠ ಹಾಗೂ ನೇತ್ರಾ ಹಿರೇಮಠ ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಇದೇ ಸಂದರ್ಭದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ನಗರದ ಸಂಕನೂರ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದಿಂದ ಕೊಡಮಾಡಲ್ಪಟ್ಟ ನಗದು ಬಹುಮಾನವನ್ನು ವಿತರಿಸಲಾಯಿತು.

ಶ್ರೇಯಾ ಚವಡಿ ಹಾಗೂ ಅನುಷಾ ಪ್ರಾರ್ಥಿಸಿದರು. ವಿದ್ಯಾರ್ಥಿಗಳಾದ ಜಿಯಾ ಹಾಗೂ ವೈಷ್ಣವಿ ಅತಿಥಿಗಳನ್ನು ಪರಿಚಯಿಸಿದರು. ಶ್ರೇಯ ಚವಡಿ ನಿರೂಪಿಸಿದರು. ಪ್ರೀತಮ್ ಪಟ್ಟೇದ ವಂದಿಸಿದರು.

ಸೈಬರ್ ಕ್ರೈಂ ಅಧಿಕಾರಿ ನಾಮದೇವ್ ಬಸವರಾಜ ಪಾಸ್ತೇ ರ‍್ಯಾಂಕ್ ಪಡೆದ ವಿದ್ಯಾರ್ಥಿಗಳನ್ನು ಅಭಿನಂದಿಸಿ, ಸೈಬರ್ ಜಗತ್ತಿನಲ್ಲಿ ಆಗುತ್ತಿರುವ ಅಪರಾಧಗಳ ಕುರಿತು ಮಾಹಿತಿ ನೀಡಿ, ಎಲ್ಲಾ ಪಾಲಕರು ತಮ್ಮ ಮಕ್ಕಳ ಬಗ್ಗೆ ಕಾಳಜಿ ವಹಿಸಿ. ಮಕ್ಕಳು ಅತಿ ಹೆಚ್ಚು ಮೊಬೈಲಿಗೆ ವ್ಯಸನರಾಗದಂತೆ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಭಾಗವಹಿಸದಂತೆ ಎಚ್ಚರ ವಹಿಸಬೇಕು. ಇತ್ತೀಚೆಗೆ ಛಾಯಾಚಿತ್ರಗಳನ್ನು ಎಡಿಟ್ ಮಾಡಿ ಜಾಲತಾಣಗಳಲ್ಲಿ ಹರಿಬಿಡುತ್ತಿದ್ದಾರೆ. ಇಂತಹ ಸಮಸ್ಯೆಗಳು ಎದುರಾದಾಗ ಹಾಗೂ ದೂರು ಕೊಟ್ಟಾಗ ಅವರ ಹತ್ತಿರದವರೇ ಮೋಸ ಮಾಡಿದ್ದಾರೆಂದು ತಿಳಿದು ಬರುತ್ತದೆ. ಆದಷ್ಟು ನಿಮ್ಮ ವೈಯಕ್ತಿಕ ಮಾಹಿತಿಯನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ ಹಾಗೂ ನಿಮಗೂ ಮತ್ತು ನಿಮ್ಮ ಸುತ್ತಮುತ್ತಲಿನ ಯಾರಿಗಾದರೂ ಈ ರೀತಿ ಸಮಸ್ಯೆಗಳು ಉಂಟಾದರೆ ಕೂಡಲೇ ನಮ್ಮನ್ನು ಸಂಪರ್ಕಿಸಿ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

# ದಲಿತರಿಗೆ ಮೀಸಲಿಟ್ಟ ಹಣವನ್ನು ಬಿಡುಗಡೆ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ




ರಾಜ್ಯದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ದಲಿತರ ಅಭಿವೃದ್ಧಿಗಾಗಿ ಮೀಸಲಿಟ್ಟ 11 ಸಾವಿರ ಕೋಟಿ ರೂಪಾಯಿಗಳನ್ನು ಬಳಕೆ ಮಾಡಿದ್ದು, ತಕ್ಷಣವೇ ಈ ಹಣವನ್ನು ಬಿಡುಗಡೆ ಮಾಡಿ ದಲಿತರ ಅಭಿವೃದ್ಧಿಗಾಗಿ ವಿನಿಯೋಗಿಸಬೇಕೆಂದು ಕರ್ನಾಟಕ ಮಾದಿಗ ಸಂಘರ್ಷ ಸಮಿತಿ ಗದಗ ಜಿಲ್ಲಾಧ್ಯಕ್ಷ ರಾಘವೇಂದ್ರ ಪರಸಪ್ಪ ಪರಾಪೂರ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಡಾ. ಬಿ.ಆರ್. ಅಂಬೇಡ್ಕರರು ದಲಿತರ ಅಭಿವೃದ್ಧಿಯಾಗಬೇಕಾದರೆ ದಲಿತರು ಶಿಕ್ಷಣ ಪಡೆಯಬೇಕು ಎಂದು ಹೇಳಿದ್ದಾರೆ. ಆದರೆ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವ ರಾಜ್ಯ ಸರ್ಕಾರ ದಲಿತ ಸಮುದಾಯದ ಮಕ್ಕಳಿಗೆ ಸ್ಕಾಲರ್‌ಶಿಪ್, ದಲಿತ ಪೌರ ಕಾರ್ಮಿಕರ ಮನೆ ನಿರ್ಮಾಣಕ್ಕೆ ಮತ್ತು ಆರೋಗ್ಯಕ್ಕೆ, ದಲಿತ ಮಕ್ಕಳ ಉನ್ನತ ಶಿಕ್ಷಣಕ್ಕಾಗಿ, ದಲಿತರಿಗಾಗಿ ಇದ್ದ ಯೋಜನೆಗಳು ಸ್ಥಗಿತಗೊಂಡಿವೆ. ಕೂಡಲೇ ರಾಜ್ಯ ಸರ್ಕಾರ ದಲಿತರ ಹಣ 11 ಸಾವಿರ ಕೋಟಿ ಹಣವನ್ನು ಬಿಡುಗಡೆ ಮಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ರೈತರಿಗೆ ಈ ಹಿಂದೆ ನೀಡುತ್ತಿದ್ದ ಎಲ್ಲ ಸೌಲಭ್ಯಗಳನ್ನು ಕಡಿತ ಮಾಡಿದೆ. ಈ ಯೋಜನೆಗಳನ್ನೂ ಪುನಃ ಪ್ರಾರಂಭಿಸಬೇಕು ಎಂದು ಅವರು ವಿನಂತಿಸಿದ್ದಾರೆ.

# ‘ಒಬ್ಬಟ್ಟು’ ಸಿನಿಮಾಗೆ ಯು/ಎ ಸರ್ಟಿಫಿಕೇಟ್



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೀರ್ತನಾ ಮೂವ್ಹಿ ಮೇಕರ್ಸ್ ಬೆಂಗಳೂರು ಅವರ, ಲೋಕೇಶ್ ವಿದ್ಯಾಧರ ನಿರ್ದೇಶನದ ‘ಒಬ್ಬಟ್ಟು’ ಕನ್ನಡ ಚಲನಚಿತ್ರಕ್ಕೆ ಸೆನ್ಸಾರ್ ಮಂಡಳಿಯು ಯು/ಎ ಸರ್ಟಿಫಿಕೇಟ್ ನೀಡಿದೆ.

ಹಾಸ್ಯಭರಿತ ಕಥಾಸಾರ ಹೊಂದಿದ ‘ಒಬ್ಬಟ್ಟು’ ಚಿತ್ರೀಕರಣವನ್ನು ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕು, ಹಲಗೂರು ಹೋಬಳಿ ಸಾಗ್ಯ ಸರಗೂರು ಗ್ರಾಮದಲ್ಲಿ ಮಾಡಲಾಗಿದೆ. ಕೊಲೆ ರಹಸ್ಯ ಭೇದಿಸುವ ಒಂದು ಹಾಸ್ಯಪೂರಿತ ಮನರಂಜನೆಯನ್ನೊಳಗೊಂಡ ಕಥೆಯಿರುವ ಚಿತ್ರವಾಗಿದ್ದು, ಒಬ್ಬಟ್ಟಿನ ರುಚಿಯನ್ನು ಥೇಟರ್‌ಗಳಲ್ಲೇ ಪ್ರೇಕ್ಷಕರು ಬಂದು ನಗೆಹೂರಣದ ಸವಿಯನ್ನು ಸವಿಯಬೇಕು. ಶೀಘ್ರದಲ್ಲೇ ರಾಜ್ಯಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆ ಮಾಡುವದಾಗಿ ನಿರ್ದೇಶಕ, ನಿರ್ಮಾಪಕ ಲೋಕೇಶ ವಿದ್ಯಾಧರ ಹೇಳುತ್ತಾರೆ.

ಚಿತ್ರದಲ್ಲಿ ನಾಯಕ ಅಮಿತ್‌ರಾವ್, ಕಿರುತೆರೆ, ಚಲನಚಿತ್ರ ಕಲಾವಿದೆ ಸುನಂದ ಕಲ್ಬುರ್ಗಿ, ಲೋಕೇಶ್ ವಿದ್ಯಾಧರ, ಮಂಡ್ಯ ನಾಗರಾಜ್, ಮುತ್ತುರಾಜ್ ಟಿ, ರಾಜು ಅರಸಿಕೆರೆ, ರೋಹಿಣಿ, ಧನಲಕ್ಷ್ಮೀ, ಮಂಜುಳಾ ಕೆಂಪೇಗೌಡ್ರು, ಸತೀಶ್ ಶೆಟ್ಟಿ, ರವಿ, ನಂಜಪ್ಪ ಡಿ.ಎಸ್ ಮುಂತಾದವರು ಅಭಿನಯಿಸಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ಬೆಟ್ಟೇಗೌಡ ಕೀಲಾರ, ಸ್ವರ ಸಂಯೋಜನೆ ಮತ್ತು ಹಾಡುಗಾರಿಕೆ ಎ.ಪಿ. ರವಿಕೀರ್ತಿ, ನೃತ್ಯ ಅಲ್ಲಿನ್ ಎ, ಸಾಹಸ ಸೂರ್ಯ, ಸಂಕಲನ ಸಂಜೀವರೆಡ್ಡಿ, ಪ್ರಸಾಧನ ಯತೀಶ, ಸಹಕಾರ ಆನಂದ ಆರ್ಟ್ಸ್, ಪತ್ರಿಕಾ ಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ. ವೀರೇಶ್ ಹಂಡಿಗಿ, ಕಥೆ, ಚಿತ್ರಕಥೆ, ಸಂಭಾಷಣೆ, ನಿರ್ದೇಶನ ಲೋಕೇಶ್ ವಿದ್ಯಾಧರ, ನಿರ್ಮಾಪಕರು ಸುನಂದಾ ಕಲ್ಬುರ್ಗಿ ಮತ್ತು ಲೋಕೇಶ್ ವಿದ್ಯಾಧರ ಆಗಿದ್ದಾರೆ.

# ಗ್ರಾಮೀಣಾಭಿವೃದ್ಧಿ ವಿದ್ಯಾರ್ಥಿಗಳಿಂದ ಗ್ರಾಮ ವಾಸ್ತವ್ಯ

■ವಿಜಯಸಾಕ್ಷಿ ಸುದ್ದಿ, ಗದಗ



ತಾಲೂಕಿನ ಕಳಸಾಪೂರ ಗ್ರಾಮದಲ್ಲಿ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಗ್ರಾಮ ವಾಸ್ತವ್ಯ ಮತ್ತು ಅಧ್ಯಯನ ಶಿಬಿರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಯೋಜಕರಾದ ಸುರೇಶ ಲಮಾಣಿ ವಹಿಸಿಕೊಂಡಿದ್ದರು.

ಕಾರ್ಯಕ್ರಮ ಉದ್ದೇಶಿಸಿ ಸಿ.ಬಿ. ಪಲ್ಲೇದ ಮಾತನಾಡಿ, ನಮ್ಮ ದೇಶದ ಹೃದಯ ಹಳ್ಳಿಗಳಲ್ಲಿದೆ. ಸಂಪನ್ಮೂಲಗಳ ಮತ್ತು ಸಾಮಾಜಿಕ ನಕ್ಷೆ ಗ್ರಾಮಸ್ಥರನ್ನು ಕೂಡಿಸಿ ಮಾಡುವುದು, ಸಂಪನ್ಮೂಲಗಳನ್ನು ಯಾವ ರೀತಿಯಾಗಿ ಬಳಸಿಕೊಳ್ಳುವುದು, ಸಾಮಾಜಿಕ ನಕ್ಷೆ ಜನರ ಸ್ಥಿತಿಗತಿ ಯಾವ ಜನರು ಇದ್ದಾರೆ, ಸೌಲಭ್ಯಗಳ ಕುರಿತು ತಿಳಿದುಕೊಳ್ಳುವುದು, ಶಾಲಾ ಸುಧಾರಣೆ-ದಾಖಲಾತಿ ಮತ್ತು ವಂಚಿತ ಮಕ್ಕಳನ್ನು ಗುರುತಿಸಿ ಶಿಕ್ಷಣದ ಬಗ್ಗೆ ಮನವರಿಕೆ ಮಾಡುವುದು, ಆರೋಗ್ಯ, ಶಿಕ್ಷಣ ಮೂಲಸೌಕರ್ಯ ಬಗ್ಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದು ತಿಳಿಸಿದರು.

ಬಸವ ಕೇಂದ್ರದ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಖಂಡಮ್ಮನವರ ಮಾತನಾಡುತ್ತಾ, ಯುವಕರು ಸ್ವಯಂ ಪ್ರೇರಕರಾಗಬೇಕು ಮತ್ತು ಜಾಗೃತರಾಗಬೇಕು. ಇಂದು ಪ್ರಪಂಚದಾದ್ಯಂತ ಎಲ್ಲ ಕಡೆಯೂ ವೈದ್ಯಕೀಯ ವಿಶ್ವವಿದ್ಯಾಲಯ, ಕಾಲೇಜು, ವೈದ್ಯರು, ಆಸ್ಪತ್ರೆಗಳು, ಔಷಧ ಅಂಗಡಿಗಳು ಇದ್ದರೂ ಸಹ ರೋಗಗಳು ಮತ್ತು ರೋಗಿಗಳ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿದೆ. ರೋಗ ನಿರೋಧಕ ಆಹಾರಗಳೆಂದರೆ ಬೇಯಿಸದ ತರಕಾರಿಗಳು, ಸೊಪ್ಪು, ಮೊಳಕೆ ಕಾಳುಗಳು, ಹಣ್ಣುಗಳು. ಆದರೆ ಅನಾರೋಗ್ಯವಂತರಿಗೆ ಇವೇ ಔಷಧವೂ ಆಗುತ್ತದೆ ಎಂದು ಅಭಿಪ್ರಾಯಪಟ್ಟರು.

ಸುರೇಶ ಲಮಾಣಿ ಗ್ರಾಮ ವಾಸ್ತವ್ಯ ಮತ್ತು ಅಧ್ಯಯನದ ಮಹತ್ವವನ್ನು ಅದರ ವಿಶೇಷತೆಯನ್ನು ಹಾಗೂ ವಿಶ್ವವಿದ್ಯಾಲಯ ಗ್ರಾಮ ವಾಸ್ತವ್ಯದ ಪರಿಕಲ್ಪನೆಯನ್ನು ನೀಡಿದರು.

ರೇಣುಕಾ ಟಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಪಂಚಾಯತ್ ಪಿ.ಡಿ.ಓ. ಮಹೇಶ ವಂದಿಸಿದರು ಎಂದು ರವಿ ಸುತಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಧಾನಿ ಮೈಸೂರಿನಲ್ಲಿ ತಂಗಿದ್ದ ಹೋಟೆಲ್ ಬಿಲ್ ಪಾವತಿಸದ ಸರ್ಕಾರ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



2023ರ ಏಪ್ರಿಲ್‌ನಲ್ಲಿ ಮೈಸೂರಿಗೆ ಭೇಟಿ ನೀಡಿದ್ದ ಪ್ರಧಾನಿ ನರೇಂದ್ರ ಮೋದಿ ಅವರು ತಂಗಿದ್ದ ‘ರಾಡಿಸನ್ ಬ್ಲೂ’ ಪ್ಲಾಜಾ ಹೋಟೆಲ್, 80.6 ಲಕ್ಷ ಮೊತ್ತದ ಬಿಲ್‌ಗಳನ್ನು ಪಾವತಿಸದ ಆರೋಪದ ಮೇಲೆ ಕಾನೂನು ಕ್ರಮದ ಎಚ್ಚರಿಕೆ ನೀಡಿದೆ ಎಂದು ವರದಿಯಾಗಿದೆ. ಜೂನ್ 1, 2024 ರೊಳಗೆ ಬಾಕಿ ಪಾವತಿಸದಿದ್ದರೆ ಕಾನೂನು ಕ್ರಮ ತೆಗೆದುಕೊಳ್ಳುವುದಾಗಿ ಹೋಟೆಲ್ ನೋಟಿಸ್ ನೀಡಲಾಗಿದೆ ಎನ್ನಲಾಗಿದೆ.

ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ (ಎನ್‌ಟಿಸಿಎ) ಮತ್ತು ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ (MoEF) ಆಯೋಜಿಸಿದ್ದ 50 ವರ್ಷಗಳ ಪ್ರಾಜೆಕ್ಟ್ ಟೈಗರ್ ಕಾರ್ಯಕ್ರಮವನ್ನು ಉದ್ಘಾಟಿಸಲು ಪ್ರಧಾನಿ ಹೋಟೆಲ್‌ನಲ್ಲಿ ತಂಗಿದ್ದರು.

3 ಕೋಟಿ ವೆಚ್ಚದಲ್ಲಿ ಏಪ್ರಿಲ್ 9 ರಿಂದ 11 ರವರೆಗೆ ಕಾರ್ಯಕ್ರಮವನ್ನು ನಡೆಸಲು ರಾಜ್ಯ ಅರಣ್ಯ ಇಲಾಖೆಗೆ ಸೂಚನೆ ನೀಡಲಾಗಿದ್ದು, 100% ಕೇಂದ್ರ ಸರ್ಕಾರದ ನೆರವು ನೀಡುವ ಭರವಸೆ ನೀಡಲಾಗಿದೆ ಎಂದು ಹಿಂದೂ ವರದಿ ಮಾಡಿದೆ. ಆದರೆ, ಕಾರ್ಯಕ್ರಮವನ್ನು ಅಲ್ಪಾವಧಿಯಲ್ಲಿ ನಡೆಸಿದ್ದರಿಂದ ಕಾರ್ಯಕ್ರಮದ ವೆಚ್ಚ 6.33 ಕೋಟಿ ಆಗಿತ್ತು ಎನ್ನಲಾಗಿದೆ.

ಕೇಂದ್ರ ಸರ್ಕಾರದಿಂದ ಆರಂಭಿಕ ಅಂದಾಜು ಮೊತ್ತ 3 ಕೋಟಿ ಬಿಡುಗಡೆಯಾಗಿದ್ದು, ಉಳಿದ ಮೊತ್ತ ಇನ್ನೂ ಇತ್ಯರ್ಥವಾಗಿಲ್ಲ. ಸೆಪ್ಟೆಂಬರ್ 29, 2023 ರಂದು, ಕರ್ನಾಟಕ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ವನ್ಯಜೀವಿ) ಡೆಪ್ಯೂಟಿ ಇನ್ಸ್‌ಪೆಕ್ಟರ್-ಜನರಲ್, ಎನ್‌ಟಿಸಿಎ, ನವದೆಹಲಿ ಅವರಿಗೆ ಬಾಕಿಯನ್ನು ಪಾವತಿಸುವಂತೆ ಪತ್ರ ಬರೆದಿದ್ದಾರೆ. ಆದಾಗ್ಯೂ, 3.33 ಕೋಟಿ ಹೆಚ್ಚುವರಿ ವೆಚ್ಚವನ್ನು ರಾಜ್ಯ ಸರ್ಕಾರ ಭರಿಸಬೇಕೆಂದು ಎನ್‌ಟಿಸಿಎ ಫೆಬ್ರವರಿ 12, 2024 ರಂದು ಪತ್ರ ಬರೆದಿದೆ ಎನ್ನಲಾಗಿದೆ.

ಮಾರ್ಚ್ 22, 2024 ರಂದು ಪಿಸಿಸಿಎಫ್ ಮತ್ತೊಂದು ಪತ್ರವನ್ನು ಬರೆದು ಪ್ರಧಾನಿಯವರ ತಂಗುವಿಕೆಯ ಹೋಟೆಲ್ ಬಿಲ್‌ಗಳನ್ನು ತೆರವುಗೊಳಿಸದಿರುವುದು ಸೇರಿದಂತೆ ಬಾಕಿಯಿರುವ 80.6 ಲಕ್ಷ. ಆದರೆ, ಇದುವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಪತ್ರದಲ್ಲಿ ವಿವರಿಸಲಾಗಿದೆ.

ಬಿಲ್‌ಗಳನ್ನು ಪಾವತಿಸದ ಕಾರಣ, ರಾಡಿಸನ್ ಬ್ಲೂ ಪ್ಲಾಜಾದ ಹಣಕಾಸು ಪ್ರಧಾನ ವ್ಯವಸ್ಥಾಪಕರು ಮೇ 21, 2024 ರಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಬಸವರಾಜು ಅವರಿಗೆ ಪತ್ರ ಬರೆದು ಬಾಕಿಯಿರುವ ಬಗ್ಗೆ ನೆನಪಿಸಿದರು. ಅವರ ಪತ್ರದಲ್ಲಿ, ವಿಳಂಬ ಪಾವತಿಯು ವಾರ್ಷಿಕ 18% ಬಡ್ಡಿಯನ್ನು ಆಕರ್ಷಿಸುತ್ತದೆ ಎಂದು ಹೋಟೆಲ್ ಹೇಳಿದೆ. ಜೂನ್ 1, 2024 ರೊಳಗೆ ಬಾಕಿಯನ್ನು ಇತ್ಯರ್ಥಪಡಿಸದಿದ್ದಲ್ಲಿ ಹೋಟೆಲ್ ಆಡಳಿತವು ಕಾನೂನು ಕ್ರಮಕ್ಕೆ ಮುಂದಾಗುತ್ತದೆ ಎಂದು ಎಚ್ಚರಿಕೆ ನೀಡಿದೆ.

### ಬಿಸಿಎನ್ ಸ್ಪೆಕ್ಟ್ರಂ ಇಂಗ್ಲೀಷ್ ಮೀಡಿಯಂ ಸ್ಕೂಲ್‌ನ 25ನೇ ವರ್ಷದ ಬೆಳ್ಳಿಹಬ್ಬದ ಸಂಭ್ರಮ

# ಗುರುವಿಗಿಂತ ಶ್ರೇಷ್ಠ ವ್ಯಕ್ತಿ ಮತ್ತೊಬ್ಬರಿಲ್ಲ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಾವು ಗಳಿಸಿದ ಆಸ್ತಿ, ಅಂತಸ್ತು, ಸಂಪತ್ತು ಯಾವುದೂ ಕೊನೆಯವರೆಗೂ ಉಳಿಯದು. ಆದರೆ ಕಲಿತ ವಿದ್ಯೆ ಮಾತ್ರ ಕೊನೆಯವರೆಗೂ ಜೊತೆ-ಗಿರುತ್ತದೆ. ಮಕ್ಕಳ ಬಾಳಲ್ಲಿ ಜ್ಞಾನ ಜ್ಯೋತಿ ಬೆಳಗಿಸಿ ಅವರನ್ನು ಸತ್ಪ್ರಜೆಗಳನ್ನಾಗಿ ರೂಪಿಸುವ ಶಿಲ್ಪಿಗಳಾದ ಶಿಕ್ಷಕರನ್ನು ಜೀವನದುದ್ದಕ್ಕೂ ಪೂಜ್ಯನೀಯ ಭಾವನೆಯಿಂದ ಕಾಣಬೇಕು ಎಂದು ಬಿಸಿಎನ್ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಲೋಹಿತ್ ನೆಲವಿಗಿ ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಪಟ್ಟಣದ ಬಿಸಿಎನ್ ಸ್ಪೆಕ್ಟ್ರಂ ಇಂಗ್ಲೀಷ್ ಮೀಡಿಯಂ ಸ್ಕೂಲ್‌ನ 25ನೇ ವರ್ಷದ ಬೆಳ್ಳಿಹಬ್ಬದ ಸಂಭ್ರಮ ಮತ್ತು ಮಹಾಸಾಂಸ್ಕೃತಿಕ ಮೇಳ ಕಾರ್ಯಕ್ರಮದ ಮೊದಲ ದಿನವಾದ ಶುಕ್ರವಾರ ಗುರುವಂದನಾ ಮತ್ತು ಹಳೆಯ ವಿದ್ಯಾರ್ಥಿಗಳ ಸಮ್ಮಿಲನ ಕಾರ್ಯಕ್ರಮ ನೆರವೇರಿಸಿ ಮಾತನಾಡಿದರು.

ಜೀವನದಲ್ಲಿ ಗುರಿ, ಛಲ, ಗುರುವಿನ ಆಶೀರ್ವಾದ ಇದ್ದರೆ ಮಾತ್ರವೇ ವಿದ್ಯೆ ಕಲಿತು ಸಮಾಜದಲ್ಲಿ ಉನ್ನತ ಸ್ಥಾನ ಗಳಿಸಲು ಸಾಧ್ಯ. ನಾವು ಇಂದು ಏನಾದರೂ ಗಳಿಸಿದ್ದರೆ ಅದೆಲ್ಲವೂ ಈ ಸಮಾಜದಿಂದ. ಹಾಗಾಗಿ ಈ ಸಮಾಜದಿಂದ ಪಡೆದ ಒಂದಷ್ಟನ್ನಾದರೂ ನಾವು ಮತ್ತೆ ಸಮಾಜಕ್ಕೆ ಹಿಂದಿರುಗಿಸಬೇಕು. ಆ ಮೂಲಕ ಅಕ್ಷರ ಕಲಿಸಿದ ಗುರುಗಳು, ಜನ್ಮ ಕೊಟ್ಟ ಹೆತ್ತವರು, ಆಡಿ ಬೆಳೆದ ಭೂಮಿಯ ಋಣವನ್ನು ತೀರಿಸಲು ಸಾಧ್ಯವಾಗುತ್ತದೆ ಎಂದರು.

ನಿರ್ದೇಶಕಿಯರಾದ ಡಾ. ರೇವತಿ ಲೋಹಿತ ನೆಲವಗಿ, ಶಿಲ್ಪಾ ಪ್ರಶಾಂತ ನೆಲವಿಗಿ ಮಾತನಾಡಿ, ಗುರು-ಶಿಷ್ಯ ಪರಂಪರೆ ಶ್ರೇಷ್ಠವಾಗಿದ್ದು, ಸಾಧಕರ ಸಾಧನೆಯ ಹಿಂದೆ ಗುರುವಿನ ಶ್ರೀರಕ್ಷೆ ಇರುತ್ತದೆ. ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಬದಲಾವಣೆಗಳಾಗಿದ್ದರೂ ನೈತಿಕ ಮೌಲ್ಯಗಳು, ಸಂಸ್ಕೃತಿಯನ್ನು ರೂಡಿಸುವ ಶಿಕ್ಷಣ ಇಂದಿನ ಅವಶ್ಯಕತೆಯಾಗಿದೆ. ಭವಿಷ್ಯದ ಭವ್ಯ ನಾಗರಿಕರನ್ನು ರೂಪಿಸುವಲ್ಲಿ ಎಂದಿಗಿಂತಲೂ ಇಂದು ಶಿಕ್ಷಕರಿಗೆ ಸಾಮಾಜಿಕ ಜವಾಬ್ದಾರಿ ಹೆಚ್ಚಿದೆ ಎಂದರು.

ಸಂಸ್ಥೆಯ ಮುಖ್ಯಸ್ಥರಾದ ಲತಾದೇವಿ ನೆಲವಗಿ, ಶಿಕ್ಷಕರಾದ ಸುವರ್ಣಾ ಜಬಡಿ, ಕಾಂಚನಾ ಕುಲಕರ್ಣಿ, ಪುಷ್ಪಾ ಶಿಗ್ಲಿ, ಸುಮಲತಾ ಪಾಟೀಲ, ಸವಿತಾ ಮಳಿಮಠ, ಭವ್ಯಾ ಕತ್ತಿ, ಆರ್.ಎಂ. ಕದಡಿ, ಆರ್.ಎನ್. ಹುರಕಡ್ಲಿ, ಸಿ.ಬಿ. ಪಲ್ಲೇದ, ಸುಧಾ ಸಂಭಾಜಿ, ಶಾಂಭವಿ ಅಕ್ಕೂರ, ವಿಶಾಲಾಕ್ಷಿ ಬಾರ್ಕಿ, ರಜಿಯಾ ನದಾಫ್, ಸಂತೋಷ ಶೆಟ್ಟರ, ಎಸ್.ಸಿ. ಹೂವಿನ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಶಾಲೆಯ ಆಡಳಿತಾಧಿಕಾರಿ ನಾಗರಾಜ ಯಂಡಿಗೇರಿ ಪ್ರಾಸ್ತಾವಿಕ ಮಾತನಾಡಿ, ಶಿಕ್ಷಣ ಸೇವೆಯೇ ದೇವರ ಸೇವೆ ಎಂಬ ಸದುದ್ದೇಶದಡಿ ಬಿಸಿನ್ ವಿದ್ಯಾ ಸಂಸ್ಥೆ 25 ವರ್ಷಗಳ ಕಾಲ ಸಾವಿರಾರು ಮಕ್ಕಳ ಭವಿಷ್ಯ ಬೆಳಗಿಸುವ ಕಾರ್ಯ ಮಾಡಿದೆ. ಸಂಸ್ಥೆ ಮತ್ತು ಶಿಕ್ಷಕರ ಕಾರ್ಯ ಶ್ಲಾಘನೀಯ. ಇದೀಗ ಈ ಶಿಕ್ಷಣ ಸಂಸ್ಥೆ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಹೊಸತನದೊಂದಿಗೆ ದಿಟ್ಟ ಹೆಜ್ಜೆ ಇಟ್ಟಿದೆ ಎಂದು ಹೇಳಿದರು.

# ಜೆಡಿಎಸ್ ಜಿಲ್ಲಾ ಕಾರ್ಯಾಲಯ ಸ್ಥಳಾಂತರ

■ವಿಜಯಸಾಕ್ಷಿ ಸುದ್ದಿ, ಗದಗ

ಜೆಡಿಎಸ್ ಪಕ್ಷದ ಗದಗ ಜಿಲ್ಲಾ ಕಾರ್ಯಾಲಯ ಈ ಮೊದಲು ಸಿಡಿಓ ಜೈನ ಸ್ಕೂಲ್ ರಸ್ತೆಯ ಮಾನ್ವಿ ಲೇಔಟ್ ಬಳಿ ಇತ್ತು. ಸದರಿ ಕಚೇರಿಯನ್ನು ದತ್ತಾತ್ರೇಯ ರಸ್ತೆಯ ಶ್ರೀ ಮಕ್ಬುಲಸಾಬ ಶಿರಹಟ್ಟಿ ಇವರ ಕಾಂಪ್ಲೆಕ್ಸ್ ಮೇಲೆ ಇರುವ ಹಾಲ್‌ಗೆ ಸ್ಥಳಾಂತರಿಸಲಾಗಿದೆ.

ಪಕ್ಷದ ಪದಾಧಿಕಾರಿಗಳು, ಹಿರಿಯರು, ಕಾರ್ಯಕರ್ತರು ಕಾರ್ಯಾಲಯಕ್ಕೆ ಭೇಟಿ ಕೊಡಲು ಈ ವಿಳಾಸಕ್ಕೆ ಬರಬೇಕೆಂದು ಅಥವಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್ ಕೊಪ್ಪಳ (ದೂ: 99458 63772) ಅವರನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬೇಕೆಂದು ಪ್ರಕಟಣೆ ತಿಳಿಸಿದೆ.

# ಹೊರಗುತ್ತಿಗೆ ನೇಮಕಾತಿಯಲ್ಲಿ ಕಡ್ಡಾಯ ಮೀಸಲಾತಿ ಸ್ವಾಗತಾರ್ಹ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಹೊರಗುತ್ತಿಗೆ ನೇಮಕಾತಿಯಲ್ಲಿ ಕಡ್ಡಾಯವಾಗಿ ಮೀಸಲಾತಿ ಸಂಬಂಧಿಸಿದಂತೆ ಅಧಿಕೃತ ಆದೇಶ ಮಾಡಲು ಸಹಕಾರ ನೀಡಿದ ಸರ್ಕಾರದ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವರು ಹಾಗೂ ಸಂಪುಟದ ನಿಲುವು ಸ್ವಾಗತಾರ್ಹ ಎಂದು ಗದಗ ಜಿಲ್ಲಾ ದಲಿತ ಸಮುದಾಯದ ಮುಖಂಡ ಸತೀಶ ಎಚ್.ಹೂಲಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯ ಮೂಲಕ ಹೇಳಿಕೆ ನೀಡಿ, ಸಚಿವ ಸಂಪುಟ ಸಭೆ ಕೈಗೊಂಡಿದ್ದ ನಿರ್ಣಯವನ್ನು ಆಧರಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಈ ಸಂಬಂಧ ಸುತ್ತೋಲೆ ಹೊರಡಿಸಿದೆ. ಈ ಮೀಸಲು ವ್ಯವಸ್ಥೆಯಲ್ಲಿ ಮಹಿಳೆಯರಿಗೆ ಶೇ. 33 ಮೀಸಲು ಕಡ್ಡಾಯವಾಗಿದ್ದು, ಎಲ್ಲಾ ಇಲಾಖೆಗಳು ಸ್ವಾಯತ್ತ ಸಂಸ್ಥೆ ನಿಯಮ ಮಂಡಳಿ ವಿಶ್ವವಿದ್ಯಾಲಯಗಳಿಗೂ ಇದು ಅನ್ವಯವಾಗಲಿದೆ. ಹೊರಗುತ್ತಿಗೆ ನೇಮಕಾತಿಯಲ್ಲಿ ಮೀಸಲು ನೀಡುವಂತೆ ವಿವಿಧ ದಲಿತ ಪರ ಸಂಘಟನೆಗಳು ನಿರಂತರ ಹೋರಾಟ ಮಾಡುತ್ತಾ ಬಂದಿವೆ. ಈಗ ಸರ್ಕಾರದ ಆದೇಶ ಬಂದಿದ್ದು, ಈ ಆದೇಶದಿಂದ ಸಾಮಾಜಿಕ ನ್ಯಾಯ ಸಿಗುವಂತಾಗಲಿ ಎಂದಿದ್ದಾರೆ.

## ನಿಧನ ವಾರ್ತೆ

### ಭೀಮರಾವ್ ದೇಶಪಾಂಡೆ



ಗದಗ: ಹುಲಕೋಟಿಯ ನಿವಾಸಿ, ನಿವೃತ್ತ ಶಿಕ್ಷಕ ಭೀಮರಾವ್ ಹನಮಂತರಾವ್ ದೇಶಪಾಂಡೆ ತಮ್ಮ 76ನೇ ವಯಸ್ಸಿನಲ್ಲಿ ಇತ್ತೀಚೆಗೆ ಬೆಂಗಳೂರಿನಲ್ಲಿ ನಿಧನರಾದರು. ಮೃತರು ಪತ್ನಿ, ಮಗ, ಮಗಳು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ. ಕುರ್ತಕೋಟಿಯ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸಿದ್ದ ಅವರು ಅಪಾರ ಶಿಷ್ಯಸಮೂಹ ಹೊಂದಿದ್ದರು.

# ರೇಷ್ಮೆ ಕೃಷಿ ಸ್ಥಳಗಳಿಗೆ ವಿದ್ಯಾರ್ಥಿಗಳ ಭೇಟಿ

■ವಿಜಯಸಾಕ್ಷಿ ಸುದ್ದಿ, ಗದಗ

ಕೈಗಾರಿಕೆ ಹಾಗೂ ಕೃಷಿ ಸ್ಥಳಗಳಿಗೆ ವಿದ್ಯಾರ್ಥಿಗಳು ಭೇಟಿ ನೀಡಿ ಪ್ರಾಯೋಗಿಕ ಜ್ಞಾನವನವನ್ನು ಪಡೆಯುವುದು ಶಿಕ್ಷಣ ಒಂದು ಭಾಗವಾಗಿದ್ದು, ಇದು ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಜ್ಞಾನವನ್ನು ನೀಡುತ್ತದೆ. ಪ್ರತಿಯೊಬ್ಬರು ತಮ್ಮ ಸ್ವಂತ ಅನುಭವಗಳಿಂದ ಮತ್ತು ಇತರರ ಅನುಭವದಿಂದ ಕಲಿಯಲು ಸಾಕಷ್ಟು ವ್ಯತ್ಯಾಸವಿದೆ. ಸ್ವಂತ ಅನುಭವಗಳು ಹೆಚ್ಚು ಜ್ಞಾನವನ್ನು ನೀಡುತ್ತವೆ ಎಂದು ಪ್ರೊ. ಸಂತೋಷ ಮೂರಶಿಳ್ಳಿಯವರು ತಿಳಿಸಿದರು.




ಕೆಎಲ್‌ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ, ಗದಗ ಗೃಹ ವಿಜ್ಞಾನ ವಿಭಾಗಗಳ ವಿದ್ಯಾರ್ಥಿನಿಯರು ಶಿರಹಟ್ಟಿ ಹಾಗೂ ಗದಗ ಸುತ್ತಮುತ್ತಲ ರೇಷ್ಮೆ ಕೃಷಿ ಕ್ಷೇತ್ರಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಪ್ರಸ್ತುತ ರೇಷ್ಮೆ ಕೃಷಿಯ ಪದ್ಧತಿಯನ್ನು ಕಲಿತು ತಮ್ಮ ವಿದ್ಯಾಭ್ಯಾಸದ ನಂತರ ಯಾವ ರೀತಿ ಈ ಉದ್ಯೋಗವನ್ನು ಮಾಡಬಹುದು ಎಂದು ತಿಳಿಸಿದರು. ಇದರ ಜೊತೆಗೆ ಕಾಲಕಾಲಕ್ಕೆ ಹೊಸದಾಗಿ ವಿಕಸನಗೊಂಡ ತಂತ್ರಜ್ಞಾನಗಳನ್ನು ಬಳಸಿಕೊಂಡು ರೇಷ್ಮೆ ಕೃಷಿಯಿಂದ ತಮ್ಮ ಜೀವನೋಪಾಯವನ್ನು ಹೆಚ್ಚಿಸುವ ಲಾಭದಾಯಕ ಮಾರ್ಗದ ಬಗ್ಗೆ ವಿದ್ಯಾರ್ಥಿಗಳಿಗೆ ಮನವರಿಕೆ ನೀಡಿದರು.

ಪ್ರಸ್ತುತ ಕೈಗಾರಿಕೆ ಹಾಗೂ ಕೃಷಿ ಸ್ಥಳಗಳಿಗೆ ಭೇಟಿ ನೀಡಲು ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎ.ಕೆ. ಮಠ ಮಾರ್ಗದರ್ಶನ ನೀಡಿದರು. ಮಹಾವಿದ್ಯಾಲಯಗಳ ಗೃಹ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಪ್ರೊ. ವೀಣಾ ತಿರ್ಲಾಪೂರ ಹಾಗು ಗೃಹ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಯೋಗ ಪಾಠಶಾಲೆಯ 49ನೇ ವಾರ್ಷಿಕೋತ್ಸವ ಸಮಾರಂಭ

# ಯೋಗವು ಪರಿಪೂರ್ಣ ಆರೋಗ್ಯದ ಸಂಜೀವಿನಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಆರೋಗ್ಯ ಸಂಸ್ಥೆಯ ಧ್ಯೇಯದಂತೆ ಒಬ್ಬ ವ್ಯಕ್ತಿ ದೈಹಿಕ, ಮಾನಸಿಕ, ಸಾಮಾಜಿಕ, ಆಧ್ಯಾತ್ಮಿಕವಾಗಿ ಆರೋಗ್ಯವಾಗಿದ್ದರೆ ಮಾತ್ರ ಅವನು ಆರೋಗ್ಯವಂತ. ಈ ನಿಟ್ಟಿನಲ್ಲಿ ನಾವೆಲ್ಲರೂ ಆರೋಗ್ಯವಂತರಾಗಿರುವದಿಲ್ಲ. ಆರೋಗ್ಯವನ್ನು ನೀರು, ಗಾಳಿ, ಆಹಾರ, ಔಷಧಿ, ವ್ಯಾಯಾಮಗಳಿಂದ ಪಡೆಯಬಹುದಾರೂ ಅದು ಪರಿಪೂರ್ಣ ಆರೋಗ್ಯವಾಗಿರುವದಿಲ್ಲ. ಪರಿಪೂರ್ಣ ಆರೋಗ್ಯವನ್ನು ಯೋಗದಿಂದ ಮಾತ್ರ ಪಡೆಯಬಹುದು ಎಂದು ಡಾ. ಎಸ್.ಟಿ. ನಂದಿಬೇವೂರ ಅಭಿಪ್ರಾಯಪಟ್ಟರು.

ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಜರುಗಿದ ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ 49ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು.

ಅರುಣಾ ನಂದಿಬೇವೂರ ಮಾತನಾಡಿ, ಮಹಿಳೆಯರು ಟಿ.ವಿ. ಧಾರಾವಾಹಿ, ಇನ್ನಿತರೆ ಪ್ರಚಾರ ಮಾಧ್ಯಮಗಳಿಗೆ ಹೆಚ್ಚಿನ ಒಲವು ತೋರದೆ, ಯೋಗ, ಆಧ್ಯಾತ್ಮ ಸಾಧನೆಯತ್ತ ಸಾಗಿದರೆ ಕುಟುಂಬದಲ್ಲಿನ ಅಂತಃಕಲಹಗಳು ದೂರಾಗಿ, ಮಕ್ಕಳು ಸುಸಂಸ್ಕೃತರಾಗಿ ಬೆಳೆಯುವರು. ಇದರಿಂದ ಕುಟುಂಬದಲ್ಲಿ ಶಾಂತಿ ನೆಲೆಸುವುದೆಂದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವದ ಲಾಂಛನ (ಲೋಗೋ) ಬಿಡುಗಡೆಗೊಳಿಸಿದರು. ಸಾನ್ನಿಧ್ಯ ವಹಿಸಿದ ಅಡವೀಂದ್ರ ಮಠದ ಧರ್ಮದರ್ಶಿ ವೇ.ಮೂ. ಮಹೇಶ್ವರ ಸ್ವಾಮಿಗಳು, ವಾಗ್ಮಿಗಳಾದ ಪ್ರಾ. ಕೆ.ಎಚ್. ಬೇಲೂರ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಗೌರವ ಅಧ್ಯಕ್ಷೆ ಅನ್ನಪೂರ್ಣ ವರವಿ, ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ ಮಾತನಾಡಿದರು.

ಸಂಗನಗೌಡ ಜಕ್ಕನಗೌಡ್ರ ಇವರು ಪಿಎಸ್‌ಐ ಹುದ್ದೆಯಿಂದ ನಿವೃತ್ತರಾದ ನಿಮಿತ್ತ ಸನ್ಮಾನಿಸಲಾಯಿತು. ಮಹಾವಿದ್ಯಾಲಯದ ಕಟ್ಟಡ ದೇಣಿಗೆ ಸಂಗ್ರಹ ಯಾತ್ರೆಗೆ ದೇಣಿಗೆ ನೀಡುವ ಮೂಲಕ ಚಾಲನೆ ನೀಡಿದ ಕೆ.ವಿ. ಗೋಣಿ, ಡಾ. ಎಸ್.ಡಿ. ಯರಗೇರಿ, ನಮನ ಟ್ರಸ್ಟ್ ಅಧ್ಯಕ್ಷ ವಿ.ಬಿ. ಮೇಕಳಿ, ಪಾರ್ವತಿ ಭೂಮಾ, ಸುನಂದಾ ಜ್ಯಾನೋಪಂತರ, ಅನ್ನಪೂರ್ಣ ಅಸೂಟಿ, ಗೌರಿ ಜಿರಂಕಳಿ ಇವರನ್ನು ಸನ್ಮಾನಿಸಲಾಯಿತು.

ಸಂಜನಾ ಸಜ್ಜನರ ಯೋಗಾಸನ ಪ್ರದರ್ಶನ ನೀಡಿದರು. ಅಶ್ವಿನಿ ಪವಾರ, ಸೋನಿಯಾ ಭಾಂಡಗೆ, ಅರುಣಾ ಇಂಗಳಳ್ಳಿ, ಸುನಂದಾ ಜ್ಯಾನೋಪಂತರ, ರಾಜೇಶ್ವರಿ ಭಾಂಡಗೆ ಕೋಲಾಟ ನೃತ್ಯ ಪ್ರದರ್ಶಿಸಿದರು. ಸಭಾಂಗಣದಲ್ಲಿ ಡಿ.ಬಿ. ಚಿಗರಿ, ವಿ.ಎಂ. ಮುಂದಿನಮನಿ, ವಿ.ಎಚ್. ಪಾಟೀಲ, ಡಾ. ಸುರೇಶ ಹಿರೇಮಠ, ಬಿ.ಬಿ. ತೋಟಗೇರ, ಮಲ್ಲಿಕಾರ್ಜುನ ಮೇಟಿ, ಪ್ರಭು ಜಕ್ಕನಗೌಡ್ರ, ಚೇತನ ಚುಂಚಾ, ಜಯಶ್ರೀ ವಸ್ತ್ರದ, ಶಾಂತಾ ಮುಂದಿನಮನಿ, ಶಶಿಕಲಾ ಬೆಲ್ಲದ, ವಿಜಯಾ ಚನ್ನಶೆಟ್ಟಿ, ಸುಜಾತಾ ಕಪ್ಪಲಿ, ಸುನಿತಾ ಮೇಟಿ, ಸುಮಂಗಲಾ ಹದ್ಲಿ, ಜಯಶ್ರೀ ಡಾವಣಗೇರಿ, ವಿಜಯಲಕ್ಷ್ಮೀ ಮೇಕಳಿ, ಸುನಿತಾ ಮೇಟಿ, ಗಿರಿಜಾ ನಾಲತ್ವಾಡಮಠ, ಮಹಾದೇವಿ ಚರಂತಿಮಠ ಮುಂತಾದವರಿದ್ದರು.

ಸುನಂದಾ ಎಸ್.ಜೆ. ಪ್ರಾರ್ಥಿಸಿದರು. ಯೋಗ ಪಾಠಶಾಲೆ ಆಡಳಿತ ಮಂಡಳಿ ಸದಸ್ಯ ಡಾ. ಎಂ.ವಿ. ಐಹೊಳ್ಳಿ ಸ್ವಾಗತಿಸಿದರು. ನಿರ್ದೇಶಕ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕ ನುಡಿ ತಿಳಿಸಿದರು. ರವಿ ಉಮಚಗಿ ಕಾರ್ಯಕ್ರಮ ನಿರೂಪಿಸಿದರು. ಡಾ. ಎಸ್.ಕೆ. ನಾಲತ್ವಾಡಮಠ ವಂದಿಸಿದರು.

ಯೋಗ ಕೇವಲ ಕಾಯಿಲೆ ನಿವಾರಣೆಗಾಗಿ ಇರದೆ, ಒಂದು ಅತ್ಯಮೂಲ್ಯ ಶಿಕ್ಷಣವಾಗಿದೆ ಮತ್ತು ಸರ್ವ ಶಿಕ್ಷಣಗಳ ಭಂಡಾರವಾಗಿದೆ, ಮಾನವೀಯ ಮೌಲ್ಯಗಳನ್ನು ಪ್ರತಿಬಿಂಬಿಸುವ ಕೈಗನ್ನಡಿಯಾಗಿದೆ. ಇಂತಹ ಯೋಗ ಶಿಕ್ಷಣವನ್ನು ಶಾಲಾ-ಕಾಲೇಜುಗಳ ಪಠ್ಯದಲ್ಲಿ ಕಡ್ಡಾಯಗೊಳಿಸಿದರೆ ಸದೃಢ, ಸಶಕ್ತ, ಸುಂದರ ಭಾರತ ನಿರ್ಮಾಣಗೊಳ್ಳಲು ಸಾಧ್ಯ ಎಂದು ಡಾ. ಎಸ್.ಟಿ. ನಂದಿಬೇವೂರ ಹೇಳಿದರು.

# ಮಾಜಿ ಶಾಸಕ ರಘುಪತಿ ಭಟ್ ಬಿಜೆಪಿಯಿಂದ ಉಚ್ಚಾಟನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪಕ್ಷದಿಂದ ಟಿಕೆಟ್ ಸಿಗದ ಹಿನ್ನೆಲೆ ವಿಧಾನಪರಿಷತ್ ಚುನಾವಣೆಗೆ ನೈರುತ್ಯ ಪದವೀಧರ ಕ್ಷೇತ್ರದಿಂದ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಉಡುಪಿಯ ಮಾಜಿ ಶಾಸಕ ರಘುಪತಿ ಭಟ್ ಅವರನ್ನು ಬಿಜೆಪಿ ಆರು ವರ್ಷಗಳ ಕಾಲ ಉಚ್ಚಾಟಿಸಿದೆ.

ಈ ಕುರಿತು ಆದೇಶ ಹೊರಡಿಸಿರುವ ಬಿಜೆಪಿಯ ರಾಜ್ಯ ಶಿಸ್ತು ಸಮಿತಿ ಅಧ್ಯಕ್ಷ ಲಿಂಗರಾಜ್ ಪಾಟೀಲ್ ಅವರು, "ಪಕ್ಷದ ಸೂಚನೆಯನ್ನು ಕಡೆಗಣಿಸಿ ವಿಧಾನಪರಿಷತ್ ಚುನಾವಣೆಗೆ ನೈರುತ್ಯ ಪದವೀಧರ ಕ್ಷೇತ್ರದಿಂದ ನಮ್ಮ ಪಕ್ಷದ ಅಧಿಕೃತ ಅಭ್ಯರ್ಥಿ ವಿರುದ್ಧವೇ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧಿಸಿ ಪಕ್ಷಕ್ಕೆ ಮುಜುಗರ ತಂದಿದ್ದೀರಿ. ಇದು ಪಕ್ಷದ ಶಿಸ್ತು ಉಲ್ಲಂಘನೆಯಾಗಿದೆ. ತಮ್ಮನ್ನು ತಕ್ಷಣದಿಂದಲೇ ಪಕ್ಷದ ಎಲ್ಲಾ ಜವಾಬ್ದಾರಿಗಳಿಂದ ಮುಕ್ತಗೊಳಿಸಿ, ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟಿಸಲಾಗಿದೆ" ಎಂದು ತಿಳಿಸಿದ್ದಾರೆ.

ಅಗಡಿ ಇಂಜನಿಯರಿಂಗ್ ಕಾಲೇಜಿನ ಪದವಿ ಪ್ರದಾನ ಸಮಾರಂಭದಲ್ಲಿ ಪ್ರೊ.ಆನಂದ ದೇಶಪಾಂಡೆ

# ಸಾಧಿಸುವ ಇಚ್ಛೆಯಿದ್ದರೆ ಎಲ್ಲವೂ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಂದಿನ ಆಧುನಿಕ ಮಾಹಿತಿ ಮತ್ತು ತಂತ್ರಜ್ಞಾನ ಯುಗದಲ್ಲಿ ಹೊಸ ಅನ್ವೇಷಣೆ-ಸಂಶೋಧನೆಗಳಿಂದ ತಂತ್ರಜ್ಞಾನ ಮತ್ತು ವಿಜ್ಞಾನ ಕ್ಷೇತ್ರದಲ್ಲಿ ಸಾಕಷ್ಟು ಪ್ರಗತಿಯಾಗಿದೆ. ದೇಶದ ಅಭಿವೃದ್ಧಿಗೆ ಪೂರಕ ಕಾರ್ಯ ಮಾಡುವ ಗುರಿಯನ್ನು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಂದಾಗಬೇಕು ಎಂದು ಬಾಗಲಕೋಟೆ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ.ಆನಂದ ದೇಶಪಾಂಡೆ ಅಭಿಪ್ರಾಯಪಟ್ಟರು.

ಅವರು ಶನಿವಾರ ಇಲ್ಲಿನ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ 2024ರಲ್ಲಿ ತಾಂತ್ರಿಕ ಶಿಕ್ಷಣದ ವಿವಿಧ ವಿಭಾಗಗಳಲ್ಲಿ ಪದವಿ ಪೂರೈಸಿದ ಸುಮಾರು 226 ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಪದವಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದರು.

ಸಾಧಿಸುವ ಇಚ್ಛೆಯಿದ್ದರೆ ಏನೆಲ್ಲ ಸಾಧನೆ ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಯುವ ಇಂಜಿನಿಯರುಗಳು ದೇಶದ ವಿವಿಧ ಕ್ಷೇತ್ರಗಳ ಮತ್ತಷ್ಟು ಪ್ರಗತಿಗಾಗಿ ಹೊಸ ತಂತ್ರಜ್ಞಾನವನ್ನು ಕಂಡುಹಿಡಿದು ತಮ್ಮದೇ ಆದ ಶ್ರೇಷ್ಠ ಕೊಡುಗೆ ಸಲ್ಲಿಸಬೇಕು. ಮೊಬೈಲ್, ಕಂಪ್ಯೂಟರ್ ಬಳಕೆ ಅತಿಯಾಗುತ್ತಿದ್ದು, ಇಂಜಿನಿಯರಿಂಗ್ ವಿದ್ಯಾರ್ಥಿಗಳು ಇದರ ಸದ್ವಿನಿಯೋಗ ಮಾಡಿಕೊಳ್ಳಬೇಕು. ಯುವಕರು ದೇಶದ ಶಕ್ತಿಯಾಗಿದ್ದು, ನಮಗೆ ಭಾಷೆ, ನಡುವಳಿಕೆ, ಸಂಸ್ಕೃತಿ, ಸದಾಚಾರ, ಬದುಕಿಗೆ ಆಸರೆ ಕಲ್ಪಿಸಿದ ಸಮಾಜ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಕೈ ಜೋಡಿಸಬೇಕು. ಈ ನಿಟ್ಟಿನಲ್ಲಿ ಸಮರ್ಪಣಾ ಮನೋಭಾವ ಹೊಂದಬೇಕು ಎಂದರು.




ಮಕ್ಕಳ ಭವಿಷ್ಯದ ಬಗ್ಗೆ ಹತ್ತಾರು ಕನಸುಗಳನ್ನು ಕಂಡ ತಂದೆ-ತಾಯಿ, ಗುರು-ಹಿರಿಯರನ್ನು ಗೌರವದಿಂದ ಕಾಣಬೇಕು. ವಿದ್ಯಾರ್ಥಿಗಳು ತಮ್ಮಲ್ಲಿನ ಕೀಳರಿಮೆ, ಋಣಾತ್ಮಕ ಚಿಂತನೆಯನ್ನು ಬದಿಗೊತ್ತಿ ಇದು ನನ್ನಿಂದ ಸಾಧ್ಯ ಎಂಬ ಧನಾತ್ಮಕ ಮನೋಭಾವ, ಆತ್ಮಸ್ಥೈರ್ಯದಿಂದ ಮುನ್ನಡೆದರೆ ಯಶಸ್ಸು ಸಾಧ್ಯ. ಇಂದಿನ ತಾಂತ್ರಿಕ ಮತ್ತು ಔದ್ಯೋಗಿಕ ಯುಗದಲ್ಲಿ ತಾಂತ್ರಿಕ ವಿದ್ಯಾರ್ಥಿಗಳಿಗೆ ವಿಫುಲ ಅವಕಾಶಗಳಿವೆ. ಅದರ ಜೊತೆ ಸಾಮಾಜಿಕ ಚಿಂತನೆ ಮೈಗೂಡಿಸಿಕೊಂಡು ಸಮಾಜಕ್ಕೆ ಒಳ್ಳೆಯದನ್ನು ಮಾಡುವಂತಹ ಶ್ರೇಷ್ಠ ನಾಗರಿಕರು ನೀವಾಗಬೇಕು. ಮಕ್ಕಳಿಗಾಗಿ ಕಷ್ಟಪಟ್ಟ ತಂದೆ-ತಾಯಂದಿರು, ವಿದ್ಯೆ ನೀಡಿದ ಗುರುಗಳನ್ನು ಗೌರವದಿಂದ ಕಾಣಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಡಾ. ಸುಭಾಸ ಮೇಟಿ, ಡಾ. ಗಿರೀಶ ಯತ್ತಿನಹಳ್ಳಿ, ಡಾ. ಆರ್.ಎಂ. ಪಾಟೀಲ, ಡಾ. ಎನ್. ಹಯವದನ, ಡಾ. ಎಸ್.ವಿ. ಮಹಾಪುರುಷ, ಡಾ. ವಿಕ್ರಮ ಶಿರೋಳ, ಡಾ. ದೇವೆಂದ್ರಪ್ಪ ಕೆ., ಡಾ. ಸಂತೋಷ ಬುಜರಿ, ಪ್ರೊ. ರಾಜೇಂದ್ರಕುಮಾರ ಶೆಟ್ಟರ, ಪ್ರೊ. ಶಂಭುಲಿಂಗಪ್ಪ ಎಚ್.ಎಸ್, ಡಾ. ಅರುಣ ಕುಂಬಿ, ಪ್ರೊ. ರಾಜೇಶ್ವರಿ ಗಾಮನಗಟ್ಟಿ, ಪ್ರೊ. ಪ್ರತಿಮಾ ತಾಳಿಕೋಟಿ, ಪ್ರೊ. ಸೋಮಶೇಖರ ಕೆರಿಮನಿ, ಪ್ರೊ. ಎಸ್.ಎಫ್. ಕೊಡ್ಲಿ, ಮುಂತಾದವರು ಉಪಸ್ಥಿತರಿದ್ದರು. ಪ್ರೊ. ಪ್ರತಿಮಾ ಮಹಾಪುರುಷ ಸ್ವಾಗತಿಸಿದರು, ವೈಭವಿ ಪ್ರಾರ್ಥಿಸಿದರು, ಮೇಘಾ, ಶ್ರದ್ಧಾ ನಿರೂಪಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ.ಪರಶುರಾಮ ಬಾರಕಿ ಮಾತನಾಡಿ, ದಿ.ವೆಂಕಪ್ಪ ಅಗಡಿಯವರು ತಮ್ಮ ಹುಟ್ಟೂರಿನಲ್ಲಿ ತಾಂತ್ರಿಕ ಕಾಲೇಜು ಸ್ಥಾಪಿಸುವ ಮೂಲಕ ಅವರ ಊರಿಗೆ ವಿಶೇಷ ಕೊಡುಗೆ ನೀಡಿದ್ದಾರೆ. ಗ್ರಾಮೀಣ ಮಟ್ಟದಲ್ಲಿ ಉನ್ನತ ದರ್ಜೆಯ ಶಿಕ್ಷಣ ನೀಡುತ್ತಿರುವ ಅಗಡಿ ಸಂಸ್ಥೆಯು 21 ವರ್ಷಗಳಿಂದ ಶಿಕ್ಷಣ ರಂಗದಲ್ಲಿ ಸೇವೆ ನೀಡುತ್ತಿದ್ದು, ಎಲ್ಲರ ಸಹಕಾರದಿಂದ ಉತ್ತಮ ಸಾಧನೆ ಮಾಡುತ್ತಿರುವದು ನಮ್ಮ ಸಂಸ್ಥೆಗೆ ಹೆಮ್ಮೆಯ ವಿಷಯ ಎಂದರು.

# ಜೀವನ ಪರಿಪೂರ್ಣತೆಗೆ ವಿದ್ಯೆ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಆಧುನಿಕ ಜೀವನದಲ್ಲಿ ವಿದ್ಯೆ ಎಂಬ ಆಸ್ತಿ ಇದ್ದಲ್ಲಿ ಜೀವನ ಪರಿಪೂರ್ಣತೆಗೊಳ್ಳಲು ಸಾಧ್ಯವಾಗುತ್ತದೆ ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಹೇಳಿದರು.

ಅವರು ಪಟ್ಟಣದ ಬೀರಲಿಂಗೇಶ್ವರ ಸೇವಾ ಸಮಿತಿಯ ಹಾಲುಮತ ಸಮಾಜದ ವತಿಯಿಂದ 2023/24ನೇ ಸಾಲಿನ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯತ್ತಮ ಅಂಕ ಪಡೆದ ವಿದ್ಯಾರ್ಥಿ/ನಿಯರಿಗೆ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿ, ಇಂದು ಪ್ರತಿಯೊಬ್ಬ ಮಗುವಿನಲ್ಲಿ ತನ್ನದೇ ಆದ ಪ್ರತಿಭೆಗಳು ಇದ್ದು, ಅವುಗಳನ್ನು ಹೆಕ್ಕಿ ತೆಗೆಯುವ ಕೆಲಸವಾಗಬೇಕಿದೆ. ಅದಕ್ಕೆ ಪೂರಕವಾಗಿ ಪಾಲಕರು ಮಕ್ಕಳಿಗೆ ಉತ್ತಮ ಸಂಸ್ಕಾರ, ವಾತಾವರಣ ನೀಡಿದಲ್ಲಿ ಸಮಾಜದಲ್ಲಿ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಲು ಸಹಕಾರಿಯಾಗುತ್ತದೆ.




ಮಕ್ಕಳು ಗುರುಗಳು ಹೇಳಿದ ಪಾಠವನ್ನು ಶ್ರದ್ಧೆಯಿಂದ, ಗಮನವಿಟ್ಟು ಆಲಿಸಿದಲ್ಲಿ ಉತ್ತಮ ಅಂಕಗಳನ್ನು ಪಡೆದು ತಂದೆ-ತಾಯಿಗಳಿಗೆ, ಕಲಿಸಿದ ಗುರುಗಳಿಗೆ, ಶಾಲೆಗೆ ಹಾಗೂ ಸಮಾಜಕ್ಕೆ ಕೀರ್ತಿ ತರಲು ಸಾಧ್ಯವಾಗುತ್ತದೆ. ಸತತ 14 ವರ್ಷಗಳಿಂದ ಪ್ರತಿಭಾವಂತ ಮಕ್ಕಳ ಪ್ರತಿಭೆಯನ್ನು ಪ್ರೋತ್ಸಾಹಿಸುತ್ತಿರುವ ಹಾಲುಮತ ಸಮಾಜದ ಈ ಕಾರ್ಯ ನೀಜಕ್ಕೂ ಶ್ಲಾಘನಿಯ ಎಂದರು.

ನಿವೃತ್ತ ಆರ್‌ಟಿಓ ಬಿ.ಡಿ. ಹರ್ತಿ ಮಾತನಾಡಿ, ಮಕ್ಕಳು ಮನಸ್ಸು ಮಾಡಿದರೆ ಮಾರ್ಗ ತಾನಾಗೇ ತೆರೆದುಕೊಳ್ಳುತ್ತದೆ. ಕಲಿತ ವಿದ್ಯೆಯನ್ನು ಇನ್ನೊಬ್ಬರಿಗೆ ಹಂಚುತ್ತಾ ಹೋದಂತೆಲ್ಲಾ ನಮ್ಮಲ್ಲಿ ಜ್ಞಾನ ಹೆಚ್ಚುತ್ತಾ ಹೋಗುತ್ತದೆ ಎಂದರು.

ಫಕ್ಕೀರಯ್ಯ ಅಮೋಘಿಮಠ, ಎಂ.ಡಿ. ಬಟ್ಟೂರ, ಎಸ್.ಸಿ. ಬಡ್ನಿ, ಡಾ. ಎಸ್.ಸಿ. ಚವಡಿ, ರಾಮಣ್ಣಾ ಕಮಾಜಿ, ಬಸವರಾಜ ಸುಂಕಾಪೂರ, ಮಾಹಾಂತಪ್ಪ ನೀಲಗುಂದ, ಮಾಹಾದೇವಪ್ಪ ಗಡಾದ, ರಾಮಣ್ಣ ಹಾಳಕೇರಿ, ಗೀತಾ ತಿರ್ಲಾಪೂರ, ಎಸ್.ಬಿ. ದೊಡ್ಡಣ್ಣವರ, ಮಂಜುನಾಥ ಜಂಪಾಳಿ, ಪದ್ಮಾ ಕುಂದಗೋಳ, ಸೇರಿದಂತೆ ಸಮಾಜ ಬಾಂಧವರು, ವಿದ್ಯಾರ್ಥಿಗಳು ಹಾಗೂ ಪಾಲಕರು ಇದ್ದರು.

# ಮಾದರಿ ನಿಯಮಾವಳಿ ಅನುಷ್ಠಾನಕ್ಕೆ ಸೂಚನೆ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ನೋಂದಣಿಯಾದ ಗದಗ ಜಿಲ್ಲೆಯ ಎಲ್ಲಾ ವಕ್ಫ್ ಸಂಸ್ಥೆಗಳು ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯವು 2024ರ ಏಪ್ರಿಲ್ 23ರಂದು ನೀಡಿರುವ ಆದೇಶದಂತೆ ರಾಜ್ಯ ವಕ್ಫ್ ಮಂಡಳಿಯ ಮಾದರಿ ನಿಯಮಾವಳಿಯ ನಮೂನೆ ನಂ-42 (ಬೈಲಾ)ನ್ನು ಅಂಗೀಕರಿಸಿಕೊಳ್ಳುವುದು ಕಡ್ಡಾಯವಾಗಿದೆ.

ಈವರೆಗೂ ಮಾದರಿ ನಿಯಮಾವಳಿಯನ್ನು ಪಾಲಿಸಿದ ವಕ್ಫ್ ಸಂಸ್ಥೆಗಳು ಮಾದರಿ ನಿಯಮಾವಳಿಯ ನಮೂನೆ ನಂ. 42ನ್ನು ಸಂಬಂಧಪಟ್ಟ ದಾಖಲೆಗಳೊಂದಿಗೆ ಗದಗ ಜಿಲ್ಲಾ ವಕ್ಫ್ ಕಛೇರಿಯ ಮೂಲಕ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಂಗೀಕಾರಕ್ಕಾಗಿ ಅತೀ ಶೀಘ್ರ ಪ್ರಸ್ತಾವನೆ ಸಲ್ಲಿಸಬೇಕು ಎಂದು ವಕ್ಫ್ ಸಲಹಾ ಸಮಿತಿಯ ಜಿಲ್ಲಾಧ್ಯಕ್ಷ ಜಿ.ಎಂ. ದಂಡಿನ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಮ್ಮು-ಕಾಶ್ಮೀರದಲ್ಲಿ ಶೀಘ್ರ ವಿಧಾನಸಭಾ ಚುನಾವಣೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಲೋಕಸಭೆ ಚುನಾವಣೆಯಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಮತದಾನದ ಪ್ರಮಾಣದಿಂದ ಉತ್ತೇಜಿತವಾಗಿರುವ ಚುನಾವಣಾ ಆಯೋಗವು ಕೇಂದ್ರಾಡಳಿತ ಪ್ರದೇಶದಲ್ಲಿ ವಿಧಾನಸಭಾ ಚುನಾವಣೆಯನ್ನು ನಡೆಸುವ ಪ್ರಕ್ರಿಯೆಯನ್ನು ಅತಿ ಶೀಘ್ರದಲ್ಲಿ ಪ್ರಾರಂಭಿಸಲಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಶನಿವಾರ ಹೇಳಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಜನರು ತಮ್ಮ ಸರ್ಕಾರಕ್ಕೆ ಅರ್ಹರಾಗಿದ್ದಾರೆ ಎಂದು ಅವರು ಖಾಸಗಿ ಮಾಧ್ಯಮಕ್ಕೆ ನೀಡಿದ ಸಂದರ್ಶನದಲ್ಲಿ ತಿಳಿಸಿದ್ದಾರೆ.

ಜಮ್ಮು-ಕಾಶ್ಮೀರದ ವಿವಿಧ ಕ್ಷೇತ್ರಗಳಲ್ಲಿ ಮತದಾನದ ಪ್ರಮಾಣ ಮತ್ತು ಶೀಘ್ರದಲ್ಲೇ ವಿಧಾನಸಭಾ ಚುನಾವಣೆಗಳು ನಡೆದರೆ, ಸಂಸತ್ತಿನ ಚುನಾವಣೆಯಲ್ಲಿ ಜನರ ಭಾಗವಹಿಸುವಿಕೆಯಿಂದ ಚುನಾವಣಾ ಸಮಿತಿಗೆ ಹೆಚ್ಚಿನ ಉತ್ತೇಜನವಿದೆ ಎಂದು ಮುಖ್ಯ ಚುನಾವಣಾ ಆಯುಕ್ತರು ಹೇಳಿದರು.

"ಇದು ನನ್ನ ಕಿವಿಗೆ ಸಂಗೀತವಾಗಿದೆ. ಜನರು, ಯುವಕರು, ಮಹಿಳೆಯರು ಸಂತೋಷದಿಂದ ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಲು ಸೇರುತ್ತಿದ್ದಾರೆ. ಪ್ರಜಾಪ್ರಭುತ್ವದ ಬೇರುಗಳು ಮತ್ತಷ್ಟು ಬಲಗೊಳ್ಳುತ್ತಿವೆ, ಜನರು ಭಾಗವಹಿಸುತ್ತಿದ್ದಾರೆ" ಎಂದು ಅವರು ಹೇಳಿದರು.

"ಅವರು ತಮ್ಮ ಸರ್ಕಾರಕ್ಕೆ ಅರ್ಹರು; ನಾವು ಆ ಪ್ರಕ್ರಿಯೆಯನ್ನು ಶೀಘ್ರದಲ್ಲೇ ಪ್ರಾರಂಭಿಸುತ್ತೇವೆ.. ಇದನ್ನು ಮಾಡಲು ತುಂಬಾ ಪ್ರೋತ್ಸಾಹಿಸುತ್ತೇವೆ" ಎಂದರು.

ಮಾರ್ಚ್‌ನಲ್ಲಿ ಲೋಕಸಭೆ ಚುನಾವಣೆಯ ವೇಳಾಪಟ್ಟಿಯನ್ನು ಪ್ರಕಟಿಸಿದ ಕುಮಾರ್, ವ್ಯವಸ್ಥಾಪನಾ, ಭದ್ರತಾ ಕಾರಣಗಳಿಂದಾಗಿ ವಿಧಾನಸಭೆ ಮತ್ತು ಸಂಸತ್ತಿನ ಚುನಾವಣೆಗಳನ್ನು ಏಕಕಾಲದಲ್ಲಿ ನಡೆಸುವುದು ಪ್ರಾಯೋಗಿಕವಾಗಿಲ್ಲ ಎಂದು ಹೇಳಿದರು.

ಜಮ್ಮು ಮತ್ತು ಕಾಶ್ಮೀರದಲ್ಲಿ ಅಸೆಂಬ್ಲಿ ಚುನಾವಣೆಗಳು ನಡೆದಾಗಲೆಲ್ಲಾ, ಆಗಸ್ಟ್ 2019 ರ ಸಂವಿಧಾನದ 370 ನೇ ವಿಧಿಯನ್ನು ರದ್ದುಗೊಳಿಸಿ, ಜಮ್ಮು ಮತ್ತು ಕಾಶ್ಮೀರವನ್ನು ಎರಡು ಕೇಂದ್ರಾಡಳಿತ ಪ್ರದೇಶಗಳಾಗಿ ವಿಂಗಡಿಸಿದ ನಂತರ ಇದು ಮೊದಲನೆಯದು.

ಜಮ್ಮು ಮತ್ತು ಕಾಶ್ಮೀರದಲ್ಲಿ ಚುನಾವಣಾ ಕಸರತ್ತು ಸಾಮಾನ್ಯವಾಗಿ ಒಂದು ತಿಂಗಳ ಕಾಲ ನಡೆಯುತ್ತದೆ. ಡಿಲಿಮಿಟೇಶನ್ ವ್ಯಾಯಾಮದ ನಂತರ, ಪಾಕ್ ಆಕ್ರಮಿತ ಕಾಶ್ಮೀರಕ್ಕೆ ಹಂಚಿಕೆ ಮಾಡಲಾದ ಸ್ಥಾನಗಳನ್ನು ಹೊರತುಪಡಿಸಿ ಅಸೆಂಬ್ಲಿ ಸ್ಥಾನಗಳ ಸಂಖ್ಯೆ 83 ರಿಂದ 90ಕ್ಕೆ ಏರಿದೆ.

ಡಿಸೆಂಬರ್‌ನಲ್ಲಿ ಸುಪ್ರೀಂ ಕೋರ್ಟ್ ಜಮ್ಮು ಮತ್ತು ಕಾಶ್ಮೀರದಲ್ಲಿ ಸೆಪ್ಟೆಂಬರ್ 30 ರೊಳಗೆ ವಿಧಾನಸಭಾ ಚುನಾವಣೆ ನಡೆಸುವಂತೆ ಚುನಾವಣಾ ಸಮಿತಿಗೆ ಸೂಚಿಸಿತ್ತು.

# ಐ.ಎಮ್.ಎ, ರೋಟರಿಯಿಂದ ಆರೋಗ್ಯ ತಪಾಸಣೆ




■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ವೈದ್ಯಕೀಯ ಸಂಸ್ಥೆ ಗದಗ, ರೋಟರ‍್ಯಾಕ್ಟ ಕ್ಲಬ್, ಜೆ.ಟಿ. ಕಾಲೇಜ್ ಬಿಸಿಎ ಮತ್ತು ಬಿಬಿಎ ಹಾಗೂ ರೋಟರಿ ಸಂಸ್ಥೆ ಗದಗ-ಬೆಟಗೇರಿಯ ಸಂಯುಕ್ತಾಶ್ರಯದಲ್ಲಿ ಗದುಗಿನ ಬಾಲಕಿಯರ ಬಾಲಮಂದಿರದಲ್ಲಿ ಉಚಿತವಾಗಿ ಕಿವಿ, ಮೂಗು ಹಾಗೂ ಗಂಟಲು ತಪಾಸಣೆ ಮತ್ತು ಸ್ತ್ರೀ ರೋಗ ತಪಾಸಣೆ ಕೈಗೊಂಡು ಸಲಹೆ ಹಾಗೂ ಚಿಕಿತ್ಸೆ ನೀಡಿದರು.

ನಗರದ ಖ್ಯಾತ ಕಿವಿ, ಮೂಗು ಹಾಗೂ ಗಂಟಲು ತಜ್ಞರು ಹಾಗೂ ಭಾರತೀಯ ವೈದ್ಯಕೀಯ ಸಂಸ್ಥೆ ಗದಗನ ಕಾರ್ಯದರ್ಶಿಗಳಾದ ರೊ. ಡಾ. ಚಂದ್ರಶೇಖರ ಬಳ್ಳಾರಿ ಹಾಗೂ ಡಾ. ಪ್ರವೀಣ ಸಜ್ಜನರ ಬಾಲಕಿಯರ ಸ್ವಾಸ್ಥ್ಯ ತಪಾಸಣೆ ಮಾಡಿ ಸಲಹೆ ನೀಡಿದರು.

ರೋಟರಿ ಸಂಸ್ಥೆ ಗದಗ-ಬೆಟಗೇರಿಯ ಸದಸ್ಯರಾದ ರೊ. ಶ್ರೀಧರ ಸುಲ್ತಾನಪೂರ, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಬಾಲಕೃಷ್ಣ ಕಾಮತ, ಕಾರ್ಯದರ್ಶಿಗಳಾದ ವೀಣಾ ತಿರ್ಲಾಪೂರ, ಬಾಲಮಂದಿರದ ಮೇಲ್ವಿಚಾರಕರಾದ ಲಕ್ಷ್ಮೀ ಬಾಗೇವಾಡಿ, ರೋಟರ‍್ಯಾಕ್ಟ ಕ್ಲಬ್ ಜೆ.ಟಿ. ಕಾಲೇಜ್ ಬಿಸಿಎ ಮತ್ತು ಬಿಬಿಎ ಸಂಸ್ಥೆಯ ಅಧ್ಯಕ್ಷರಾದ ವಿಶ್ವಾಸ ಕೊಪ್ಪಳ, ಪ್ರಿಯಾ ಮುಂತಾದವರು ಉಪಸ್ಥಿತರಿದ್ದರು.

# ಗಾಲಾ ನರ್ಸಿಂಗ್ ಕಾಲೇಜಿನಲ್ಲಿ 'ಸ್ಕಿಜೋಫ್ರೇನಿಯಾ ದಿನ'

■ವಿಜಯಸಾಕ್ಷಿ ಸುದ್ದಿ, ಗದಗ

ಹಲವಾರು ಸವಾಲಿನ ಮಾನಸಿಕ ಆರೋಗ್ಯ ಅಸ್ವಸ್ಥತೆಗಳ ಪೈಕಿ ಸ್ಕಿಜೋಫ್ರೇನಿಯಾ ಅತ್ಯಂತ ದೀರ್ಘಕಾಲದ ಕಾಯಿಲೆಯಾಗಿದೆ. ಗಮನಿಸಬೇಕಾದ ಸಂಗತಿಯೆಂದರೆ, ಈ ಅಸ್ವಸ್ಥತೆಯು ಕುಟುಂಬಗಳಲ್ಲಿ ಆನುವಂಶಿಕವಾಗಿ ಕಂಡುಬರುತ್ತದೆ ಎಂದು ಅಮರಯ್ಯ ಚಿನ್ನಯ್ಯನಮಠ ಹೇಳಿದರು.




ನಗರದ ವಿ.ಪಿ. ಗಾಲಾ ಸ್ಕೂಲ್ ಆಫ್ ನರ್ಸಿಂಗ್ ಹಾಗೂ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸ್‌ನಲ್ಲಿ ಹಮ್ಮಿಕೊಂಡಿದ್ದ 'ವಿಶ್ವ ಸ್ಕಿಜೋಫ್ರೇನಿಯಾ' ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಅಸ್ವಸ್ಥತೆಯು ಭ್ರಮೆ, ಅಸಂಘಟಿತ ಚಿಂತನೆ, ಮಾತನಾಡುವಲ್ಲಿ ಅಸಂಗತತೆ ಮತ್ತು ಅಭಾಗಲಬ್ಧ ನಡವಳಿಕೆಯಿಂದ ನಿರೂಪಿಸಲ್ಪಟ್ಟಿದೆ. ಸ್ಕಿಜೋಫ್ರೇನಿಯಾ ಹೊಂದಿರುವ ಜನರು ಸಾಮಾನ್ಯವಾಗಿ ತಮ್ಮ ಭಾವನೆಗಳನ್ನು ನಿರ್ವಹಿಸಲು ಮತ್ತು ಅವುಗಳನ್ನು ವ್ಯಕ್ತಪಡಿಸಲು ಕಷ್ಟಪಡುತ್ತಾರೆ. ಇದು ತುಂಬಾ ಗಂಭೀರವಾದ ಸಮಸ್ಯೆಯಾಗಿದೆ. ಹದಿಹರೆಯದವರಲ್ಲಿ ಈ ಸಮಸ್ಯೆ ಹೆಚ್ಚಾಗಿ ಕಂಡುಬರುತ್ತಿದ್ದು, ಪ್ರಪಂಚದಾದ್ಯಂತ ಸುಮಾರು 20 ಲಕ್ಷ ಜನರು ಈ ಕಾಯಿಲೆಯಿಂದ ಬಳಲುತ್ತಿದ್ದಾರೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಅಧ್ಯಕ್ಷೆ ರಚನಾ ಗಾಲಾ, ಸೆಕ್ರೆಟರಿ ಪಂಕಜ್ ಗಾಲಾ, ನಿರ್ದೇಶಕ ಗುಂಜನ ಗಾಲಾ, ಕಾಲೇಜಿನ ಎಲ್ಲ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka